MAG(2)PRB/CR/165/2022-23
Title code: KARKAN27951



# ಮುಂಜಾನೆ ವಾರ್ತೆ

ಇ-ಪೇಪರ್: www.munjanevarthe.com
MUNJANE VARTHE
EDITOR: H.L.AMARANATH
ಸಂಪಾದಕ: ಹೆಚ್.ಎಲ್ ಅಮರನಾಥ್
ಕನ್ನಡ ದಿನಪತ್ರಿಕೆ

ಜಾಹೀರಾತಿಗಾಗಿ ಸಂಪರ್ಕಿಸಿ
9663122276
www.munjanevarthe.com

VOLUME : 2 ISSUE: 128 ಸಂಪುಟ: 02 ಸಂಚಿಕೆ: 128 ಪುಟಗಳು: 04 munjanevarthe 21 FRIDAY JUNE 2024 21 ಗುರುವಾರ ಜೂನ್ 2024 ₹ 2

ಭಾರತೀಯ ರೈಲ್ವೆ ಇಲಾಖೆಯಲ್ಲಿ 18,799 ಹುದ್ದೆಗಳ ಭರ್ತಿಗೆ ಅರ್ಜಿ ಆಹ್ವಾನ
ವಿವರಪುಟ 02

ಶ್ರೀ ಮಾತೃಭೂಮಿ ವೃದ್ಧಾಶ್ರಮದ ವೃದ್ಧರಿಗೆ ಅನ್ನ ಸಂತರ್ಪಣೆ
ವಿವರಪುಟ 03

ಪೆಟ್ರೋಲ್, ಡೀಸೆಲ್ ದರ ಏರಿಕೆ ಮಾಡಿದ್ದಾರೆ: ಕೆ.ಎಸ್.ಮಂಜುನಾಥ್‌ಗೌಡ
ವಿವರಪುಟ 04

*ತುಂಗಭದ್ರಾ ಜಲಾಶಯದಲ್ಲಿನ ಹೂಳಿನ ಸಮಸ್ಯೆ ಪರಿಹರಿಸಲು ಕೊಪ್ಪಳ ಜಿಲ್ಲೆ ನವಲಿ ಬಳಿ ಸಮಾನಾಂತರ ಜಲಾಶಯ ನಿರ್ಮಿಸುವ ಕುರಿತು ನೆರೆಯ ಆಂಧ್ರ ಪ್ರದೇಶ ಮತ್ತು ತೆಲಂಗಾಣ ರಾಜ್ಯಗಳ ಮುಖ್ಯಮಂತ್ರಿಗಳೊಂದಿಗೆ ಮಾತುಕತೆ ನಡೆಸಿ ಮುಂದಿನ ತೀರ್ಮಾನ ಕೈಗೊಳ್ಳಲಾಗುತ್ತದೆ ಎಂದು ತಿಳಿಸಿದರು.*

## ಬಸ್ ಪ್ರಯಾಣ ದರ ಏರಿಕೆ ಸರ್ಕಾರದ ಮುಂದಿಲ್ಲ

ಬಳ್ಳಾರಿ: ರಾಜ್ಯದಲ್ಲಿ ಸಾರಿಗೆ ಬಸ್ ಪ್ರಯಾಣ ದರ ಹೆಚ್ಚಳ ಮಾಡುವ ವಿಷಯ ಸದ್ಯ ಸರ್ಕಾರದ ಮುಂದೆ ಇಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಜಿಲ್ಲೆಯ ತೋರಣಗಲ್‌ನ ಜಿಂದಾಲ್ ವಿಮಾನ ನಿಲ್ದಾಣದಲ್ಲಿ ಗುರುವಾರ ಸಂಜೆ ಡೀಸೆಲ್, ಪೆಟ್ರೋಲ್ ದರ ಹೆಚ್ಚಳವಾಗಿರುವ ಹಿನ್ನೆಲೆಯಲ್ಲಿ ಸಾರಿಗೆ ಬಸ್ ದರ ಹೆಚ್ಚಳ ಮಾಡಲಾಗುತ್ತದೆಯೇ ಎಂದು ಸುದ್ದಿಗಾರರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು, ಬಸ್ ಪ್ರಯಾಣ ದರ ಏರಿಕೆ ಪ್ರಸ್ತಾವನೆ ಸರ್ಕಾರದ ಮುಂದೆ ಇಲ್ಲ ಎಂದು ಸ್ಪಷ್ಟಪಡಿಸಿದರು.

ಈ ವರ್ಷ ಗ್ಯಾರಂಟಿ ಯೋಜನೆಗಳಿಗಾಗಿ 60 ಸಾವಿರ ಕೋಟಿ ರೂ ಅನುದಾನ ಮೀಸಲಿರಿಸಿದ್ದು, ಇದರಿಂದ ರಾಜ್ಯ ಇನ್ನಷ್ಟು ಅಭಿವೃದ್ಧಿಯಾಗಲಿದೆ



ಎಂದರು. ತುಂಗಭದ್ರಾ ಜಲಾಶಯದಲ್ಲಿನ ಹೂಳಿನ ಸಮಸ್ಯೆ ಪರಿಹರಿಸಲು ಕೊಪ್ಪಳ ಜಿಲ್ಲೆ ನವಲಿ ಬಳಿ ಸಮಾನಾಂತರ ಜಲಾಶಯ ನಿರ್ಮಿಸುವ ಕುರಿತು ನೆರೆಯ ಆಂಧ್ರ ಪ್ರದೇಶ ಮತ್ತು ತೆಲಂಗಾಣ ರಾಜ್ಯಗಳ ಮುಖ್ಯಮಂತ್ರಿಗಳೊಂದಿಗೆ ಮಾತುಕತೆ ನಡೆಸಿ ಮುಂದಿನ ತೀರ್ಮಾನ ಕೈಗೊಳ್ಳಲಾಗುತ್ತದೆ ಎಂದು ತಿಳಿಸಿದರು.

ಶಾಲೆಗಳಲ್ಲಿ ಎಲ್‌ಕೆಜಿ, ಯುಕೆಜಿ ಪ್ರಾರಂಭಕ್ಕೆ ಅಂಗನವಾಡಿ ಕಾರ್ಯಕರ್ತೆಯರು ವಿರೋಧ ವ್ಯಕ್ತಪಡಿಸಿದ್ದು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಶಿಕ್ಷಣ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚಿಸಿ, ಸಮಸ್ಯೆ ಬಗೆಹರಿಸಲಾಗುವುದು ಎಂದು ಹೇಳಿದರು. ಪೆಟ್ರೋಲ್ ಡೀಸೆಲ್ ಬೆಲೆ ಹೆಚ್ಚಳ ಮಾಡಿರುವುದು ರಾಜ್ಯದ ಸಮಗ್ರ ಅಭಿವೃದ್ಧಿಗೋಸ್ಕರವೇ ಹೊರತು ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕಾಗಿ ಅಲ್ಲ ಎಂದರು.

ಕಾರ್ಮಿಕ ಸಚಿವ ಸಂತೋಷ್ ಲಾಡ್, ಸಂಸದ ಈ.ತುಕಾರಾಂ, ಕೆಎಂಎಫ್ ಅಧ್ಯಕ್ಷ ಭೀಮಾ ನಾಯಕ್, ಕೂಡ್ಲಿಗಿ ಶಾಸಕ ಎನ್.ಟಿ.ಶ್ರೀನಿವಾಸ್ ಮುಂತಾದವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಭ್ರೂಣ ಲಿಂಗ ಪತ್ತೆ ಬಗ್ಗೆ ಮಾಹಿತಿ ನೀಡಿದವರಿಗೆ 1 ಲಕ್ಷ ಬಹುಮಾನ



ಬೆಂಗಳೂರು: ಭ್ರೂಣ ಲಿಂಗ ಪತ್ತೆ ಬಗ್ಗೆ ಮಾಹಿತಿ ನೀಡಿದವರಿಗೆ ನೀಡುವ ಬಹುಮಾನವನ್ನು 50 ಸಾವಿರದಿಂದ 1 ಲಕ್ಷ ರೂ.ಗೆ ಹೆಚ್ಚಿಸಿ ಆರೋಗ್ಯ ಇಲಾಖೆ ಸುತ್ತೋಲೆ ಹೊರಡಿಸಿದೆ.

ಗರ್ಭಪೂರ್ವ ಹಾಗೂ ಪ್ರಸವಪೂರ್ವ ಭ್ರೂಣಲಿಂಗ ಪತ್ತೆ ಕಾಯ್ದೆ (ಪಿಸಿಪಿಎನ್‌ಡಿಟಿ) ಅನುಷ್ಠಾನಕ್ಕೆ ಸಂಬಂಧಿಸಿದಂತೆ ಯಶಸ್ವಿಗೊಂಡ ಗುಪ್ತ ಕಾರ್ಯಾಚರಣೆಯಲ್ಲಿ ಮಾಹಿತಿ ನೀಡಿದವರಿಗೆ ಈ ಬಹುಮಾನ ನೀಡಲಾಗುತ್ತದೆ. ಈ ಬಹುಮಾನದ ಮೊತ್ತದಲ್ಲಿ 50 ಸಾವಿರ ರೂ.ಗಳನ್ನು ರಾಷ್ಟ್ರೀಯ ಆರೋಗ್ಯ ಅಭಿಯಾನದಿಂದ ಮತ್ತು ಇನ್ನುಳಿದ 50 ಸಾವಿರ ರೂ. ಮೊತ್ತವನ್ನು ಆಯಾ ಜಿಲ್ಲೆಗಳಲ್ಲಿ ಸಂಗ್ರಹವಾಗಿರುವ ಪಿಸಿಪಿಎನ್‌ಡಿಟಿ ಶುಲ್ಕದಿಂದ ಭರಿಸಬೇಕು ಎಂದು ತಿಳಿಸಲಾಗಿದೆ.

ಆರೋಗ್ಯ ಇಲಾಖೆ ಸಚಿವ ದಿನೇಶ್ ಗುಂಡೂರಾವ್ ಅವರ ಅಧ್ಯಕ್ಷತೆಯಲ್ಲಿ ಕಳೆದ ವರ್ಷ ಡಿಸೆಂಬರ್‌ನಲ್ಲಿ ನಡೆದ ರಾಜ್ಯ ಮೇಲ್ವಿಚರಣಾ ಮಂಡಳಿ ಸಭೆಯಲ್ಲಿ ಬಹುಮಾನದ ಮೊತ್ತವನ್ನು ಏರಿಕೆ ಮಾಡುವ ಬಗ್ಗೆ ನಿರ್ಧರಿಸಲಾಗಿತ್ತು ಎಂದು ಹೇಳಲಾಗುತ್ತಿದೆ.

ಪುಟ 2ಕ್ಕೆ

## ಉಪಚುನಾವಣೆ ಗೆಲ್ಲಲು ಡಿ.ಕೆ.ಶಿವಕುಮಾರ್ ಹುನ್ನಾರ

ರಾಮನಗರ: "ಡಿ.ಕೆ.ಶಿವಕುಮಾರ್ ಚನ್ನಪಟ್ಟಣಕ್ಕೆ ಬರುವುದಾದರೆ ಸ್ವಾಗತ. ಆದರೆ ಉಪಚುನಾವಣೆಯನ್ನು ಅಕ್ರಮದಿಂದ ಗೆಲ್ಲಲು ಅವರು ಈಗಿನಿಂದಲೇ ತಯಾರಿ ಮಾಡುತ್ತಿದ್ದಾರೆ. ಕ್ಷೇತ್ರದಲ್ಲಿ ಒಂದು ಕೋಮಿನ ಜನಾಂಗದ ಆರೇಳು ಸಾವಿರ ಮತಗಳನ್ನು ಸೇರ್ಪಡೆಗೊಳಿಸಬೇಕು ಎಂದು ತಾಲೂಕು ಮಟ್ಟದ ಅಧಿಕಾರಿಗಳಿಗೆ ಆದೇಶ ನೀಡುತ್ತಿದ್ದಾರೆ" ಎಂದು ವಿಧಾನ ಪರಿಷತ್ ಸದಸ್ಯ ಸಿ.ಪಿ.ಯೋಗೇಶ್ವರ್ ಆರೋಪಿಸಿದ್ದಾರೆ.

ರಾಮನಗರದಲ್ಲಿ ಇಂದು ಮಾತನಾಡಿದ ಅವರು, "ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಯಾರು ಎಲ್ಲಿ ಬೇಕಾದರೂ ನಿಲ್ಲಬಹುದು. ಆದರೆ ಚುನಾವಣೆ ಯಾವುದೇ ಅಕ್ರಮಗಳಿಲ್ಲದೇ ಪಾರದರ್ಶಕವಾಗಿ ನಡೆಯಬೇಕು ಎಂಬುದೇ ನಮ್ಮ ಆಗ್ರಹ. ಈಗಾಗಲೇ ತಾಲೂಕಿಗೆ ಬಂದಿರುವ ಡಿ.ಕೆ.ಶಿವಕುಮಾರ್ ಅಧಿಕಾರಿಗಳಿಗೆ ಧಮ್ಕಿ ಹಾಕುವ ಕೆಲಸಕ್ಕೆ ಮುಂದಾಗಿದ್ದಾರೆ.

ಮುಂಬರುವ ಉಪಚುನಾವಣೆಯನ್ನು ವಾಮಮಾರ್ಗದಿಂದ ಎದುರಿಸುವ ಪ್ರಯತ್ನ ಮಾಡುತ್ತಿದ್ದಾರೆ" ಎಂದು ಟೀಕಿಸಿದರು.

"ಇತ್ತೀಚಿಗೆ ಚನ್ನಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಸರ್ಕಾರಿ ಅಧಿಕಾರಿಗಳಿಗೆ ಮೊಬೈಲ್ ಹೊರಗಿಟ್ಟು ಬರಬೇಕು ಎಂದು ಸೂಚನೆ ನೀಡಿದ್ದರು. ಅಷ್ಟೇ ಅಲ್ಲ, ಮಾಧ್ಯಮದವರನ್ನೂ ಹೊರಗಿಟ್ಟು ಸಭೆ ಮಾಡಿದ್ದರು.

ಇದರ ಅವಶ್ಯಕತೆ ಏನಿತ್ತು?. ಅದೇನು ಅವರ ಖಾಸಗಿ ಕಾರ್ಯಕ್ರಮವಲ್ಲ.

ಸಾರ್ವಜನಿಕರ ಸೇವೆ ಮಾಡುವ ಜಾಗದಲ್ಲಿ ಅಧಿಕಾರಿಗಳಿಗೆ ಧಮ್ಕಿ ಹಾಕಿ ವಾಮಮಾರ್ಗದಲ್ಲಿ ಉಪ ಚುನಾವಣೆ ಗೆಲ್ಲಿಸುವ ಹುನ್ನಾರ" ಎಂದು ಆಕ್ರೋಶ ವ್ಯಕ್ತಪಡಿಸಿದರು.

"ಈ ಹಿಂದೆ ಅಧಿಕಾರದಲ್ಲಿದ್ದ ನಾನು ಹಾಗೂ ಹೆಚ್.ಡಿ.ಕುಮಾರಸ್ವಾಮಿ ಎಂದಿಗೂ ಅಧಿಕಾರಿಗಳನ್ನು ಎದುರಿಸಿ ಕೆಲಸ ಮಾಡಿಸಿಕೊಳ್ಳುತ್ತಿರಲಿಲ್ಲ.

ಇದಕ್ಕೆ ನಾವು ಅವಕಾಶ ನೀಡುವುದಿಲ್ಲ. ಈ



ಬಗ್ಗೆ ಚುನಾವಣಾ ಆಯೋಗಕ್ಕೆ ದೂರು ಕೊಡುತ್ತೇವೆ" ಎಂದು ತಿಳಿಸಿದರು.

## 7ನೇ ವೇತನ ಆಯೋಗದ ವರದಿ



ಬೆಂಗಳೂರು: 7ನೇ ವೇತನ ಆಯೋಗದ ವರದಿ ಬಗ್ಗೆ ಸಚಿವ ಸಂಪುಟ ಸಭೆಯಲ್ಲಿ ಚರ್ಚೆಯಾಗಿದ್ದು, ಯಾವುದೇ ನಿರ್ಧಾರ ತೆಗೆದುಕೊಂಡಿಲ್ಲ ಎಂದು ಸಚಿವ ಹೆಚ್.ಕೆ.ಪಾಟೀಲ್ ತಿಳಿಸಿದ್ದಾರೆ.

ವೇತನ ಆಯೋಗದ ವರದಿ ಮಾರ್ಚ್?ನಲ್ಲಿ ಸರ್ಕಾರಕ್ಕೆ ಸಲ್ಲಿಕೆಯಾಗಿದೆ. ಅದರಂತೆ, ಮೂಲ ವೇತನದ ಮೇಲೆ ಶೇ.27.5ರಷ್ಟು ಹೆಚ್ಚಿಸಲು ಶಿಫಾರಸು ಮಾಡಲಾಗಿದೆ. ಸರ್ಕಾರ ಮಧ್ಯಂತರ ವರದಿಯಂತೆ ಶೇ.17ರಷ್ಟು ಹೆಚ್ಚಿಸಿ ಆದೇಶಿಸಿತ್ತು. ಕನಿಷ್ಠ ಮೂಲ ವೇತನ 17,000 ದಿಂದ 27,000 ರೂ.ಗೆ ಪರಿಷ್ಕರಣೆ ಆಗುವಂತೆ ಶಿಫಾರಸು ಮಾಡಲಾಗಿತ್ತು. ವೇತನ ಆಯೋಗದ ಶಿಫಾರಸನ್ನು ಆದಷ್ಟು ಬೇಗ ಅನುಷ್ಠಾನ ಮಾಡುವಂತೆ ರಾಜ್ಯ ಸರ್ಕಾರಿ ನೌಕರರು ಸರ್ಕಾರದ ಮೇಲೆ ಒತ್ತಡ ಹೇರುತ್ತಿದ್ದಾರೆ.

## ದೆಹಲಿ ಸಿಎಂ ಕೇಜ್ರಿವಾಲ್‌ಗೆ ಜಾಮೀನು

ನವದೆಹಲಿ: ಬಹು ವಿವಾದಿತ ಹಾಗೂ ಚರ್ಚಿತ ಅಬಕಾರಿ ನೀತಿ ಹಗರಣದಲ್ಲಿ ಬಂಧನಕ್ಕೊಳಗಾಗಿರುವ ಆಮ್ ಆದ್ಮಿ ಪಕ್ಷದ ರಾಷ್ಟ್ರೀಯ ರಾಷ್ಟ್ರೀಯ ಸಂಚಾಲಕ, ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರಿಗೆ ದೆಹಲಿ ನ್ಯಾಯಾಲಯ ಗುರುವಾರ ಜಾಮೀನು ಮಂಜೂರು ಮಾಡಿದೆ. ತಿಹಾರ್ ಜೈಲಿನಲ್ಲಿರುವ ಸಿಎಂಗೆ 1 ಲಕ್ಷ ರೂಪಾಯಿಗಳ ವೈಯಕ್ತಿಕ ಬಾಂಡ್ ಇಡುವಂತೆ ಸೂಚಿಸಿರುವ ಕೋರ್ಟ್,



ನಿರ್ದಿಷ್ಟ ಷರತ್ತುಗಳನ್ನೂ ವಿಧಿಸಿದೆ.

ಪ್ರಕರಣವೇನು?: ಹೊಸ ಅಬಕಾರಿ ನೀತಿಯನ್ನು ಕೇಜ್ರಿವಾಲ್ ನೇತೃತ್ವದ ಸರ್ಕಾರ ತರಲು ಮುಂದಾಗಿತ್ತು. ಬಳಿಕ ಅಕ್ರಮದ ಆರೋಪದ ಹಿನ್ನೆಲೆಯಲ್ಲಿ ನೀತಿಯನ್ನು ರದ್ದುಪಡಿಸಲಾಗಿದೆ. ಆದರೆ, ಈ ಪ್ರಕರಣದಲ್ಲಿ ಸಿಬಿಐ, ಜಾರಿ ನಿರ್ದೇಶನಾಲಯದ ತನಿಖೆ ಮುಂದುವರೆದಿದೆ. ಇದು ಸಿಎಂ, ಡಿಸಿಎಂ ಅವರಿಂದ

ಪುಟ 2ಕ್ಕೆ

## ಉಚಿತ ಆರೋಗ್ಯ ತಪಾಸಣಾ ಶಿಬಿರ

ಕೆ.ಆರ್.ಪೇಟೆ: ತಾಲ್ಲೂಕಿನ ಬೂಕನಕೆರೆ ಹೋಬಳಿ ವಿಠಲಾಪುರ ಗ್ರಾಮದ ಶಾಲಾ ಆವರಣದಲ್ಲಿ ನೆಡೆದ ದಿವಂಗತ ವಿ.ಡಿ ದೇವೇಗೌಡರ (ಟಿಎಪಿಸಿಎಂಎಸ್ ನಿವೃತ್ತ ಕಾರ್ಯದರ್ಶಿ ಕೆ ಆರ್ ಪೇಟೆ) ಮೂರನೇ ವರ್ಷದ ಪುಣ್ಯಸ್ಮರಣೆ ಅಂಗವಾಗಿ ಅವರ ಕುಟುಂಬಸ್ಥರು ಮತ್ತು ಹಿತೈಷಿಗಳು ಆಯೋಜಿಸಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ವಿಠಲಪುರ ಗ್ರಾಮದ ಸುತ್ತಮುತ್ತಲಿನ 850ಕ್ಕೂ ಹೆಚ್ಚು ರೋಗಿಗಳು ಚಿಕಿತ್ಸೆ ಪಡೆದುಕೊಂಡು ಶಿಬಿರವನ್ನು ಯಶಸ್ವಿಗೊಳಿಸಿದರು .

ಆದಿಚುಂಚನಗಿರಿ ವೈದ್ಯಕೀಯ ಮಹಾವಿದ್ಯಾಲಯ ಆದಿಚುಂಚನಗಿರಿ ಆಸ್ಪತ್ರೆಯ

ಪುಟ 2ಕ್ಕೆ



## ಪೆಟ್ರೋಲ್ ಡಿಸೇಲ್ ಬೆಲೆ ಹೆಚ್ಚಳ ಅವೈಜ್ಞಾನಿಕ

ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆ ಮಾಡಿರುವ ರಾಜ್ಯ ಸರ್ಕಾರದ ಕ್ರಮ ಅವೈಜ್ಞಾನಿಕವಾದುದ್ದು ಎಂದು ಮಾಜಿ ಸಚಿವ ಡಿ.ಸಿ.ತಮ್ಮಣ್ಣ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಪೆಟ್ರೋಲ್



ಮತ್ತು ಡೀಸೆಲ್ ಬೆಲೆ ಏರಿಕೆ ಮಾಡಿವುದರಿಂದ ಮೊದಲಿಗೆ ಕೈಗಾರಿಕೆಗಳ ಮೇಲೆ ಹೊರ ಬೀಳುತ್ತದೆ. ಇದರಿಂದ ಕಾರ್ಖಾನೆಗಳಿಗೆ ರೈತರು ತಾವು ಬೆಳೆದ ಬೆಳೆಗಳನ್ನು ಸರಬರಾಜು ಮಾಡಲು ಹೋದಾಗ ರೈತರಿಗೆ ಆರ್ಥಿಕವಾಗಿ ಹೊರೆ ಬೀಳುತ್ತದೆ ಎಂದು ಸುದ್ದಿ ಗೋಷ್ಠಿಯಲ್ಲಿ ತಿಳಿಸಿದರು. ಈಗಾಗಲೇ ಮಳೆಯಿಲ್ಲದ ಪರಿಣಾಮ ರೈತರು ಬೆಳೆದ ಬೆಳೆಗಳು ಒಣಗಿ ನಿಂತಿವೆ. ನಿರ್ಧಿಷ್ಟವಾಗಿ ಆದಾಯ ನೀಡುತ್ತಿದ್ದ ತೆಂಗಿಮರಗಳು ಮಳೆಯಿಲ್ಲದೆ ಒಣಗಿ ನಿಂತಿವೆ. ಹೈನುಗಾರಿಕೆ ಮಾಡಲು ಕೂಡ ಸಮಸ್ಯೆಯಾಗಿದ್ದು, ರೈತರು ವ್ಯವಸಾಯ ಮಾಡುವುದು ಹೇಗೆ ಎಂದು ಚಿಂತಿಸುವ ಸಂದರ್ಭದಲ್ಲಿ ಸರ್ಕಾರ ಪೆಟ್ರೋಲ್, ಡೀಸೆಲ್ ದರ ಹೆಚ್ಚು ಮಾಡುವ ಮೂಲಕ ಮತ್ತಷ್ಟು ಸಮಸ್ಯೆ ಉಂಟು ಮಾಡಿರುವುದು ಸರಿಯಲ್ಲ ಎಂದು ಸರ್ಕಾರದ ವಿರುದ್ಧ ಬೇಸರ ವ್ಯಕ್ತಪಡಿಸಿದರು. ಈ ಕೂಡಲೇ ರಾಜ್ಯ ಸರ್ಕಾರ ರೈತರ ಹಿತದೃಷ್ಟಿಯಿಂದ ಪೆಟ್ರೋಲ್ ಮತ್ತು ಡೀಸೆಲ್ ಹಾಗೂ ಅಗತ್ಯ ವಸ್ತುಗಳ ಬೆಲೆ ಕಡಿಮೆ ಮಾಡುವ ಮೂಲಕ ರೈತರಿಗೆ ಅನುಕೂಲ ಕಲ್ಪಿಸಬೇಕು ಎಂದು ಆಗ್ರಹ ಮಾಡಿದರು.

## ನಿರಂತರವಾಗಿ ವಿವಿಧ ವಸ್ತುಗಳ ಬೆಲೆ ಏರಿಕೆ: ಮಾಜಿ ಸಚಿವ ಕೆ.ಸಿ.ನಾರಾಯಣಗೌಡ

ಕೆ.ಆರ್.ಪೇಟೆ: ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದಲೂ ನಿರಂತರವಾಗಿ ವಿವಿಧ ವಸ್ತುಗಳ ಬೆಲೆ ಏರಿಕೆಯಾಗುತ್ತದೆ ಈ ಮೂಲಕ ಜನ ವಿರೋಧಿ ಆಡಳಿತ ನೀಡಲಾಗುತ್ತಿದೆ ಎಂದು ಮಾಜಿ ಸಚಿವ ಕೆ.ಸಿ ನಾರಾಯಣಗೌಡ ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯ ಸರ್ಕಾರ ಇಂಧನ ಬೆಲೆ ಏರಿಕೆ ಖಂಡಿಸಿ.ಪಟ್ಟಣದಲ್ಲಿರುವ ಪ್ರವಾಸಿ ಮಂದಿರದಲ್ಲಿ ಬಿಜೆಪಿ ತಾಲ್ಲೂಕು ಅಧ್ಯಕ್ಷ ಸಾರಂಗಿ ನಾಗಣ್ಣ ನೇತೃತ್ವದಲ್ಲಿ ನೆಡೆದ ಪ್ರತಿಭಟನೆಯಲ್ಲಿ ಭಾಗವಹಿಸಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಘೋಷಣೆ ಕೂಗಿ



ಮಾತನಾಡಿದರು.ರಾಜ್ಯ ಸರ್ಕಾರ ಲೋಕಸಭಾ ಫಲಿತಾಂಶ ಬರುವುದನ್ನೇ ಕಾಯುತ್ತಿತ್ತು.ಫಲಿತಾಂಶ ಬಂದ ಕೆಲವೇ ದಿನಗಳಲ್ಲಿ ಪೆಟ್ರೋಲ್ ಹಾಗೂ ಡೀಸೆಲ್ ಬೆಲೆ ಏರಿಕೆ ಮಾಡುವ ಮೂಲಕ ಜನಸಾಮಾನ್ಯರಿಗೆ ಬರೆ ನೀಡಿದೆ ಎಂದು ದೂರಿದರು.ಪೆಟ್ರೋಲ್ ಹಾಗೂ ಡೀಸೆಲ್ ಬೆಲೆ ಏರಿಕೆಯಾದಾಕ್ಷಣ ಟ್ರಾನ್ಸ್ ಪೋರ್ಟೇಷನ್ ದರವೂ ಹೆಚ್ಚಾಗುತ್ತದೆ. ಆಗ ಅನಿವಾರ್ಯವಾಗಿ ದಿನಬಳಕೆ ವಸ್ತುಗಳು ಸೇರಿದಂತೆ ಎಲ್ಲ ವಸ್ತುಗಳ ಬೆಲೆಯೂ ಏರಿಕೆಯಾಗುತ್ತದೆ. ಈ ರೀತಿ ನಿರಂತರವಾಗಿ ಬೆಲೆ

ಪುಟ 2ಕ್ಕೆ

ಜಗತ್ತಿನ ಯಾವುದೇ ಮೂಲೆಯಲ್ಲಿ ಕುಳಿತು ಮುಂಜಾನೆವಾರ್ತೆ ಓದಿ...
www.munjanevarthe.com
ಮುಂಜಾನೆ ವಾರ್ತೆ ಕನ್ನಡ ದಿನಪತ್ರಿಕೆ ಓದುಗುವುದು ಈಗ ಮತ್ತಷ್ಟು ಸುಲಭ

# ಕಾರಾಗೃಹದಲ್ಲಿಯೇ ಕಂಪ್ಯೂಟರ್ ತರಬೇತಿ ಪಡೆದು ಪ್ರಮಾಣ ಪತ್ರ ಪಡೆದ ಬಂಧಿಗಳು

ಚಾಮರಾಜನಗರ: ಕಾರಾಗೃಹ ಬಂಧಿಗಳಿಗೆಕಾರಾಗೃಹದಲ್ಲಿಯೇ ಕಂಪ್ಯೂಟರ್ ಶಿಕ್ಷಣ ತರಬೇತಿ ನೀಡುವ ರಾಜ್ಯದಲ್ಲಿಯೇ ಮೊದಲು ಎನಿಸಿರುವ ವಿನೂತನ ಅರ್ಥಪೂರ್ಣ ಕಾರ್ಯಕ್ರಮ ಚಾಮರಾಜನಗರ ಜಿಲ್ಲೆಯಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರ ವಿಶೇಷ ಕಾಳಜಿಯಿಂದ ಯಶಸ್ಸು ಕಂಡಿದೆ.

ಚಾಮರಾಜನಗರದ ಜಿಲ್ಲಾ ಕಾರಾಗೃಹದಲ್ಲಿರುವ ವಿಚಾರಣಾಧೀನ ಬಂಧಿಗಳಿಗೆ ಅಲ್ಲಿಯೇ ಕಂಪ್ಯೂಟರ್ ತರಬೇತಿ ನೀಡಿ ಅವರು ಬಿಡುಗಡೆಗೊಂಡ ಬಳಿಕ ಬದುಕು ಕಟ್ಟಿಕೊಳ್ಳಲು ನೆರವಾಗಲಿ ಎಂಬ ಉದ್ದೇಶದಿಂದ ಕಂಪ್ಯೂಟರ್ ತರಬೇತಿ ನೀಡಲು ಯೋಚಿಸಿ ಮೈಸೂರಿನ ಇನ್‌ಫೋಸಿಸ್ ರೋಟರಿ




ಪಂಚಶೀಲ ಸಂಸ್ಥೆಗಳೊಂದಿಗೆ ಸಿಎಸ್‌ಆರ್ ನೆರವಿನೊಂದಿಗೆ ಕಾರಾಗೃಹದಲ್ಲಿಯೇ ಕಂಪ್ಯೂಟರ್ ತರಬೇತಿಗೆ ಈ ಹಿಂದೆಯೇ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಚಾಲನೆ ನೀಡಿದ್ದರು. ಕಾರಾಗೃಹದಲ್ಲಿನ ಸುಸಜ್ಜಿತ ಕೊಠಡಿಯಲ್ಲಿ 10 ಕಂಪ್ಯೂಟರ್ ಮತ್ತು ಪ್ರಿಂಟರ್ಗಳೊಂದಿಗೆ ತರಬೇತಿ ಆರಂಭವಾಗಿತ್ತು. ತರಬೇತಿಗಾಗಿ 38 ವಿಚಾರಣಾಧೀನ ಬಂಧಿಗಳು ನೊಂದಣಿಯಾಗಿದ್ದರು. ಇವರಲ್ಲಿ 7 ಬಂಧಿಗಳು ಕಾರಾಗೃಹದಲ್ಲಿಯೇ ಕಂಪ್ಯೂಟರ್ನ ವಿವಿಧ ಕೋರ್ಸುಗಳನ್ನು ಕಲಿತು ಯಶಸ್ವಿಯಾಗಿ ಪೂರ್ಣಗೊಳಿಸಿ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರಿಂದ ಇಂದು ಪ್ರತಿಷ್ಠಿತ ಇನ್‌ಫೋಸಿಸ್ ಸಂಸ್ಥೆಯ ಪ್ರಮಾಣ ಪತ್ರ ಪಡೆದುಕೊಂಡಿದ್ದಾರೆ. ಈ ಮೂಲಕ ಚಾಮರಾಜನಗರ ಜಿಲ್ಲೆ ಸಾರ್ಥಕತೆ ಕಾರ್ಯ ಕೈಗೊಂಡು ರಾಜ್ಯದಲ್ಲೇ ವಿಶಿಷ್ಟ ಹೆಗ್ಗಳಿಕೆಗೆ ಪಾತ್ರವಾಗಿದೆ. ಕಾರಾಗೃಹ ಕಟ್ಟಡದಲ್ಲಿಯೇ ಬಂಧಿಗಳಿಗೆ ಕಂಪ್ಯೂಟರ್ ತರಬೇತಿ ಪಡೆಯಲು ಇನ್‌ಫೋಸಿಸ್ ಸಹಕಾರದೊಂದಿಗೆ ಐಐಎಚ್‌ಟಿ ಟೆಕಾಡಮಿ ಬೋಧಕರನ್ನ ನಿಯೋಜಿಸಲಾಗಿದೆ. ಬಂಧಿಗಳಿಗೆ ಮೈಕ್ರೋಸಾಫ್ಟ್ ಆಫೀಸ್, ಕಂಪ್ಯೂಟರ್ ಫಂಡಮೆಂಟಲ್, ಸಾಫ್ಟ್ ಸ್ಕಿಲ್ ಸೇರಿದಂತೆ ವಿವಿಧ ತರಬೇತಿಗಳನ್ನು ನೀಡಲಾಗುತ್ತಿದೆ. ಮೊದಲನೇ ತಂಡದಲ್ಲಿ 38 ಬಂಧಿಗಳು ಕಂಪ್ಯೂಟರ್ ಕೋರ್ಸುಗಳನ್ನು ಕಲಿಯಲು ಆರಂಭಿಸಿದರು. ಇವರಲ್ಲಿ ಯಶಸ್ವಿಯಾಗಿ ಕೋರ್ಸ್‌ಗಳನ್ನು ಪೂರ್ಣಗೊಳಿಸಿದ 7 ಮಂದಿಗೆ ಇನ್‌ಫೋಸಿಸ್ ಸಂಸ್ಥೆಯಿಂದ ಪ್ರಮಾಣ ಪತ್ರವನ್ನು ಜಿಲ್ಲಾಧಿಕಾರಿಯವರು ವಿತರಿಸಿದ್ದಾರೆ. 13 ಬಂಧಿಗಳು ಸಕ್ರಿಯವಾಗಿ ಕೋರ್ಸುಗಳಲ್ಲಿ ಪಾಲ್ಗೊಂಡು ವಿಶೇಷ ಗಮನಸೆಳೆದಿದ್ದು, ಇವರ ಕಲಿಕೆ ಮುಂದುವರೆದಿದೆ. ಆಸಕ್ತ ಎಲ್ಲ ಬಂಧಿಗಳಿಗೆ ಕಂಪ್ಯೂಟರ್ ತರಬೇತಿ ನೀಡುವ ಕಾರ್ಯ ಕಾರಾಗೃಹದಲ್ಲಿ ಮುಂದುವರೆಸಲಾಗಿದ್ದು ನಿರಂತರವಾಗಿ ನಡೆಯಲಿದೆ. ಕಂಪ್ಯೂಟರ್ ಕೋರ್ಸು ಪೂರ್ಣಗೊಳಿಸಿದವರಿಗೆ ಪ್ರಮಾಣ ಪತ್ರ ನೀಡುವ ಸರಳ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ದೇಶ ಕಟ್ಟುವ ಮಹತ್ವದ ಕಾರ್ಯದಲ್ಲಿ ಪ್ರತಿಯೊಬ್ಬರ ಕೊಡುಗೆ ಪಾತ್ರ ಅಮೂಲ್ಯವಾಗಿದೆ. ವಿಚಾರಣಾಧೀನ ಬಂಧಿಗಳು ಅವರು ಬಿಡುಗಡೆಗೊಂಡ ಬಳಿಕ ಬದುಕು ಹಸನಾಗಿಸಿಕೊಳ್ಳಲು ಅವರ ಭವಿಷ್ಯದ ಹಿತದೃಷ್ಟಿಯಿಂದ ಉದ್ಯೋಗ ಕೈಗೊಳ್ಳಲು ಅನುಕೂಲವಾಗಲೆಂಬ ಸದುದ್ದೇಶದಿಂದ ಕಂಪ್ಯೂಟರ್ ತರಬೇತಿ ಆರಂಭಿಸಲಾಯಿತು. ಇಂದು ನಮ್ಮ ಆಶಯ ಉದ್ದೇಶ ಫಲಪ್ರದವಾಗಿದೆ. ಈ ಮಹತ್ಕಾರ್ಯಕ್ಕೆ ಇನ್‌ಫೋಸಿಸ್, ಐಐಎಚ್‌ಟಿ ಇನ್ನಿತರ ಸಂಸ್ಥೆಗಳು ಸಿಎಸ್‌ಆರ್ ನೆರವು ನೀಡಿದ್ದು ಇದಕ್ಕಾಗಿ ಧನ್ಯವಾದಗಳನ್ನು ಅರ್ಪಿಸುವುದಾಗಿ ನುಡಿದರು. ಸಮಾಜದಲ್ಲಿ ಯಾರೂ ಮೇಲು ಅಲ್ಲ, ಕೀಳು ಅಲ್ಲ. ಪ್ರತಿಯೊಬ್ಬರಿಗೂ ಸಮಾನ ಅವಕಾಶಗಳು ಲಭಿಸಬೇಕು. ಬಂಧಿಗಳು ಇಲ್ಲಿಂದ ಬಿಡುಗಡೆಗೊಂಡ ಬಳಿಕ ಆತ್ಮವಿಶ್ವಾಸದಿಂದ ಉತ್ತಮ ಜೀವನ ಮಾಡಬೇಕು. ಕುಟುಂಬ, ಸಮಾಜಕ್ಕೆ ಆದರ್ಶ ಪ್ರಾಯವಾಗಿ ಕೊಡುಗೆ ನೀಡಬೇಕು. ಜೀವನೋಪಾಯಕ್ಕೆ ಪೂರಕವಾದ ಸ್ವಂತ ಉದ್ಯೋಗ ಮಾಡಬೇಕು ಎಂಬ ಸದಾಶಯ ನನ್ನದಾಗಿದೆ. ತರಬೇತಿ ಪಡೆದವರು ಸ್ವಂತ ಸೈಬರ್ ಕೇಂದ್ರ, ಸೇವಾ ಕೇಂದ್ರಗಳನ್ನು ತೆರೆದು ಇತರರಿಗೆ ಮಾದರಿಯಾಗಬಹುದು ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಹೇಳಿದರು ಕಾರಾಗೃಹದಲ್ಲಿಯೇ ಕಂಪ್ಯೂಟರ್ ಕಲಿಯುವ ಅವಕಾಶವನ್ನು ಇತರರು ಸದುಪಯೋಗ ಮಾಡಿಕೊಳ್ಳಬೇಕು. ನಮ್ಮ ಮನವಿಗೆ ಸ್ಪಂದಿಸಿ ಇನ್‌ಫೋಸಿಸ್ ನಂತಹ ದೊಡ್ಡ ಸಂಸ್ಥೆ ವಿವಿಧ ಕೋರ್ಸುಗಳನ್ನು ಕಲಿಸಲು ಮುಂದೆ ಬಂದಿದೆ. ಜಿಲ್ಲೆಗೆ ಲಭಿಸಿರುವ ಈ ಸದಾವಕಾಶವನ್ನು ಸಮರ್ಥವಾಗಿ ಬಳಕೆ ಮಾಡಿಕೊಳ್ಳಬೇಕು. ಇತರೆ ಜಿಲ್ಲೆಗಳಿಗೂ ಈ ಕಾರ್ಯ ಮಾದರಿಯಾಗಲಿ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಆಶಿಸಿದರು ಕಾರಾಗೃಹದ ಅಧೀಕ್ಷಕರಾದ ಎನ್.ಎಸ್. ಶಿವಕುಮಾರ್, ಇನ್‌ಫೋಸಿಸ್ ಸಂಸ್ಥೆಯ ಪ್ರೋಗ್ರಾಂ ವ್ಯವಸ್ಥಾಪಕರಾದ ಬಿಳಿಗಿರಿರಂಗ, ಐಐಎಚ್‌ಟಿ ಸಂಸ್ಥೆಯ ಬೋಧಕ ಮುಖ್ಯಸ್ಥರಾದ ಶಿವಪ್ರಸಾದ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಎ. ರಮೇಶ್ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಭ್ರೂಣ ಲಿಂಗ ಪತ್ತೆ....

ಪುಟ 1ರಿಂದ

ಆರೋಗ್ಯ ಸೇವೆಗಳು ಸಮರ್ಪಕವಾಗಿ ಜನರಿಗೆ ಸಲ್ಲದಿದ್ದರೆ ಸಹಿಸಲ್ಲ: ಅಧಿಕಾರಿಗಳ ವಿರುದ್ಧ ಸಚಿವ ದಿನೇಶ್ ಗುಂಡೂರಾವ್ ಅಸಮಾಧಾನ

ಗುಣಮಟ್ಟದ ಆರೋಗ್ಯ ಸೇವೆಗಳು ಜನರಿಗೆ ತಲುಪಿಸುವಲ್ಲಿ ಹೆಚ್ಚಿನ ಗಮನ ಹರಿಸಬೇಕು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು ಇಲಾಖೆಯ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದ್ದಾರೆ. ಬೆಂಗಳೂರಿನ ಆರೋಗ್ಯ ಸೌಧದಲ್ಲಿ ಇಂದು ಆರೋಗ್ಯ ಇಲಾಖೆಯ ಉಪನಿರ್ದೇಶಕರು ಹಾಗೂ ಕಾರ್ಯಕ್ರಮ ಅಧಿಕಾರಿಗಳೊಂದಿಗೆ ವಿಸ್ತೃತವಾಗಿ ಸಭೆ ನಡೆಸಿದ ಸಚಿವರು, ಅಧಿಕಾರಿಗಳ ಕಾರ್ಯವೈಖರಿಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ರಾಷ್ಟ್ರೀಯ ಆರೋಗ್ಯ ಯೋಜನೆಯಡಿ ಜಾರಿಯಲ್ಲಿರುವ ಆರೋಗ್ಯ ಸೇವೆಗಳು ಹೆಚ್ಚು ಪ್ರಗತಿ ಕಂಡಿಲ್ಲ. ಹಲವು ಸೇವೆಗಳು ನಿರೀಕ್ಷಿತ ಮಟ್ಟದಲ್ಲಿ ಅನುಷ್ಠಾನಗೊಂಡಿಲ್ಲ. ಕಳೆದ ವರ್ಷದ ಅವಧಿಯಲ್ಲಿ ಹಲವು ಬಿಲ್ ಗಳು ಪಾವತಿಯಾಗದೇ ಬಾಕಿ ಇರಿಸಿಕೊಂಡಿರುವ ಬಗ್ಗೆ ಅಧಿಕಾರಿಗಳಿಗೆ ಚಾಟಿ ಬೀಸಿದರು. ರಾಷ್ಟ್ರೀಯ ಆರೋಗ್ಯ ಯೋಜನೆಯಡಿ ದೊರೆಯುವ ಅನುದಾನವನ್ನು ಸಮರ್ಪಕವಾಗಿ ಬಳಸಿಕೊಂಡಿಲ್ಲ ಎಂದಾದರೆ, ಆರೋಗ್ಯ ಸೇವೆಗಳು ಸಮರ್ಪಕವಾಗಿ ತಲುಪಲು ಹೇಗೆ ಸಾಧ್ಯ ಎಂದು ಅಧಿಕಾರಿಗಳಿಗೆ ಸಚಿವರು ಚುರುಕು ಮುಟ್ಟಿಸಿದರು. ಲಭ್ಯವಿರುವ ಹಣಕಾಸಿನ ಸರಿಯಾಗಿ ಖರ್ಚು ಮಾಡದಿದ್ದರೆ ಏನು ಪ್ರಯೋಜನ? ಟೆಂಡರ್ ಪ್ರಕ್ರಿಯೆಗಳನ್ನು ಮಾರ್ಚ್??ವರೆಗೆ ಏಕೆ ಎಳೆದುಕೊಂಡು ಹೋಗುತ್ತಿದ್ದೀರಿ ಎಂದು ಅಧಿಕಾರಿಗಳನ್ನು ಪ್ರಶ್ನಿಸಿದರು. ಯಾವ ಅಧಿಕಾರಿಗಳು ಸರಿಯಾಗಿ ಕೆಲಸ ಮಾಡಲ್ಲ ಅಂತವರ ವಿರುದ್ಧ ಕ್ರಮ ಕೈಗೊಳ್ಳಲು ನಾನು ಹಿಂಜರಿಯಲ್ಲ. ಯಾರ ಮುಲಾಜೂ ನಮಗಿಲ್ಲ. ಯಾರ ಒತ್ತಡದಿಂದಲೂ ನಾನು ಒಬ್ಬ ಅಧಿಕಾರಿಯನ್ನೂ ನೇಮಿಸಿಲ್ಲ. ಆರೋಗ್ಯ ಇಲಾಖೆಯ ಹಿರಿಯ ಅಧಿಕಾರಿಗಳ ಸಲಹೆ ಮೇರೆಗೆ ಅಧಿಕಾರಿಗಳಿಗೆ ಜವಾಬ್ದಾರಿಗಳನ್ನು ನೀಡಲಾಗಿದೆ. ಹೀಗಾಗಿ ನಿಮ್ಮ ಕಾರ್ಯದಕ್ಷತೆ ತೋರದಿರುವ ಅಧಿಕಾರಿಗಳ ವಿರುದ್ಧ ನಿರ್ದಾಕ್ಷಿಣ್ಯ ನಿರ್ಧಾರಗಳನ್ನು ತೆಗೆದುಕೊಳ್ಳುವುದಾಗಿ ಸಚಿವ ದಿನೇಶ್ ಗುಂಡೂರಾವ್ ಎಚ್ಚರಿಕೆ ನೀಡಿದರು. ಜಿಲ್ಲಾಸ್ಪತ್ರೆಗಳಲ್ಲಿ ಕಾರ್ಯವೈಖರಿ, ಇ-ಆಫೀಸ್, ಟೆಲಿ ಐಸಿಯು, ಆಯುಷ್ಮಾನ್ ಭಾರತ್ ಯೋಜನೆಯ ರೆಫರೆಲ್ ಪದ್ಧತಿಗಳ ಬಗ್ಗೆ ಚರ್ಚಿಸಲು ಸಭೆ ಆಯೋಜಿಸುವಂತೆ ಇದೇ ವೇಳೆ ಸಚಿವರು ಆರೋಗ್ಯ ಇಲಾಖೆ ಹಿರಿಯ ಅಧಿಕಾರಿಗಳಿಗೆ ಸೂಚಿಸಿದರು. ಸಭೆಯಲ್ಲಿ ಎನ್.ಎಚ್.ಎಮ್. ಎಂ.ಡಿ ನವೀನ್ ಭಟ್, ಆರೋಗ್ಯ ಇಲಾಖೆಯ ಪ್ರಧಾನ ಕಾರ್ಯದರ್ಶಿ ಹರ್ಷ ಗುಪ್ತ ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ತೈಲ ಬೆಲೆ ಏರಿಕೆ ಖಂಡಿಸಿ ಬಿಜೆಪಿ-ಜೆಡಿಎಸ್ ಪ್ರತಿಭಟನೆ

ಪಾವಗಡ: ಪೆಟ್ರೋಲ್, ಡೀಸೆಲ್ ದರ ಏರಿಕೆ ಮಾಡಿರುವ ರಾಜ್ಯ ಸರ್ಕಾರದ ಧೋರಣೆ ಖಂಡಿಸಿ ಬಿಜೆಪಿ ಹಾಗೂ ಜೆಡಿಎಸ್ ತಾಲ್ಲೂಕು ಘಟಕದ ವತಿಯಿಂದ ಗುರುವಾರ ಪಟ್ಟಣದಲ್ಲಿ ಪ್ರತಿಭಟನೆ ನಡೆಸಲಾಯಿತು.

ಇಲ್ಲಿನ ಎಸ್.ಎಸ್.ಕೆ ವೃತ್ತದಲ್ಲಿ ಜಮಾಯಿಸಿದ ಬಿಜೆಪಿ-ಜೆಡಿಎಸ್ ಕಾರ್ಯಕರ್ತರು ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು. ಮೆರವಣಿಗೆ ಮೂಲಕ ತಹಶೀಲ್ದಾರ್ ಕಛೇರಿಗೆ ತೆರಳಿ ಕೆಲಹೊತ್ತು ಧರಣಿ ನಡೆಸಿ ನಂತರ ತಹಶೀಲ್ದಾರ್ ಗೆ ಮನವಿ ಸಲ್ಲಿಸಿದರು.

ತಾಲ್ಲೂಕು ಜೆಡಿಎಸ್ ಮಹಾ ಪ್ರಧಾನ ಕಾರ್ಯದರ್ಶಿ ಸೊಗಡು ವೆಂಕಟೇಶ್ ಮಾತನಾಡಿ, ಬರಗಾಲದ ಸಂಕಷ್ಟದಿಂದ ರಾಜ್ಯದ ಜನತೆ ಈಗಾಗಲೇ ಬೆಲೆ ಏರಿಕೆಯ ಬಿಸಿ ಅನುಭವಿಸುತ್ತಿದ್ದಾರೆ. ಇದೀಗ ಇಂಧನದ ಮೇಲಿನ ತೆರಿಗೆ 3 ರೂ. ಹೆಚ್ಚು ಮಾಡಿರುವುದು ತೀವ್ರ ಖಂಡನೀಯ ಎಂದರು.

ಬೆಲೆ ಹೆಚ್ಚಳದಿಂದಾಗಿ ರಾಜ್ಯ ಸರ್ಕಾರದ ಖಜಾನೆಗೆ ? 3 ಸಾವಿರ ಕೋಟಿ ಹೆಚ್ಚುವರಿ ತೆರಿಗೆ ಸಂಗ್ರಹವಾಗಲಿದೆ. ಪೆಟ್ರೋಲ್, ಡೀಸೆಲ್ ಬೆಲೆ ಹೆಚ್ಚಳದಿಂದಾಗಿ ಸರಕು ಸಾಗಣೆ ವೆಚ್ಚ ಹೆಚ್ಚಾಗಿ ಅಗತ್ಯ ವಸ್ತುಗಳ ಬೆಲೆ ಏರಿಕೆಗೆ ಕಾರಣವಾಗಲಿದೆ.

ತರಕಾರಿ, ದವಸ?ಧಾನ್ಯಗಳ ಬೆಲೆ ಹೆಚ್ಚಳದಿಂದ ಕಂಗಾಲಾಗಿರುವ ಜನರಿಗೆ ತೈಲ ಬೆಲೆಗಳ ಹೆಚ್ಚಳದಿಂದ ಗಾಯದ ಮೇಲೆ ಬರೆ ಎಳೆದಂತಾಗುತ್ತದೆ. ಈ ಕೂಡಲೇ ಇಂಧನದ ಮೇಲಿನ ತೆರಿಗೆ ಕಡಿಮೆ ಮಾಡಬೇಕು ಎಂದರು.

ಬಿಜೆಪಿ ಮುಖಂಡ ಜಿ.ಟಿ.ಗಿರೀಶ್ ಮಾತನಾಡಿ, ರಾಜ್ಯ ಸರ್ಕಾರ ಪೆಟ್ರೋಲ್ ಹಾಗೂ ಡೀಸೆಲ್ ಬೆಲೆಯನ್ನು ಹೆಚ್ಚಿಸಿರುವುದರ ಪರಿಣಾಮ ನೇರವಾಗಿ ರೈತರಿಗೆ ಹಾಗೂ ಬಡ, ಮಧ್ಯಮ ವರ್ಗದವರಿಗೆ ಹೊರೆಯಾಗುತ್ತಿದೆ.

ರಾಜ್ಯದ ಕಾಂಗ್ರೆಸ್ ಸರ್ಕಾರ




ಜನಪರ, ಬಡವರ ಪರ ಎಂದು ಬರೀ ಬಾಯಿ ಮಾತಿನಲ್ಲಿ ಹೇಳುತ್ತಿದೆ. ಶ್ರೀಸಾಮಾನ್ಯರ ಮೇಲೆ ಇದೀಗ ಇಂಧನ ಬರೆ ಎಳೆದು ಸಂಕಷ್ಟಕ್ಕೆ ತಳ್ಳಿದೆ.

ಬಡವರ ಬದುಕಿನ ಜೊತೆ ಆಟವಾಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಬಿಜೆಪಿ ಮುಖಂಡ ಶಿವಕುಮಾರ್ ಸಾಕೇಲ್ ಮಾತನಾಡಿ, ಯಾವುದೇ ಬೆಲೆ ಏರಿಕೆ ಮಾಡಲ್ಲ ಎಂದು ಸುಳ್ಳು ಹೇಳಿ ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್ ಸರ್ಕಾರ ಪೆಟ್ರೋಲ್, ಡೀಸೆಲ್, ಬಸ್ ದರ ಸೇರಿದಂತೆ ಎಲ್ಲಾ ದರ ಏರಿಕೆ ಮಾಡಿದೆ. ಈಗಾಗಲೇ ಗಗನಕ್ಕೇರಿರುವ ದಿನಬಳಕೆ ವಸ್ತುಗಳು ಮತ್ತಷ್ಟು ತುಟ್ಟಿಯಾಗಲಿವೆ. ಬಡವರು ಬದುಕು ನಡೆಸುವುದು ದುಸ್ತರವಾಗಲಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಮುಖಂಡರಾದ ರಂಗಣ್ಣ, ಅಲ್ಕುಂದರಾಜು, ಬ್ಯಾಡನೂರು ಶಿವು, ಬಿ.ಹೊಸಹಳ್ಳಿ ಪ್ರಸಾದ್ ಬಾಬು, ಅಕ್ಕಲಪ್ಪ ನಾಯ್ಡು, ಕಾವಲಗೇರಿ ರಾಮಾಂಜಿ, ಗಂಗಾಧರ್ ನಾಯ್ಡು, ಮುರಳಿ, ನಾಗರಾಜು, ಬೊಮ್ಮಲಿಂಗ, ತಿಪ್ಪೇಸ್ವಾಮಿ ಮತ್ತಿತರರು ಇದ್ದರು.

# ನಾವು ಶ್ರದ್ಧೆಯಿಂದ ಯಾವುದನ್ನು ಕಲಿತರೂ ಅದರಿಂದ ನಮಗೆ ನಷ್ಟವಾಗುವುದಿಲ್ಲ

ಸಾಗರ : ನಾವು ಶ್ರದ್ಧೆಯಿಂದ ಯಾವುದನ್ನು ಕಲಿತರೂ ಅದರಿಂದ ನಮಗೆ ನಷ್ಟವಾಗುವುದಿಲ್ಲ. ಯಾವತ್ತೂ ವಿದ್ಯೆಯ ಕಲಿಕೆ ಅಂತಹ ಶ್ರದ್ಧೆಯನ್ನು ಬಯಸುತ್ತದೆ ಎಂದು ಆಂತರಿಕ ಲೆಕ್ಕಪರಿಶೋಧಕ ಬಿ.ವಿ.ರವೀಂದ್ರನಾಥ್ ಅಭಿಪ್ರಾಯ ವ್ಯಕ್ತಪಡಿಸಿದರು.

ತಾಲೂಕಿನ ಎಡಜಿಗಳೇಮನೆ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಶಾರದಾಪುರದ ಇಕ್ಕೇರಿ ಪ್ರೌಢಶಾಲೆಯಲ್ಲಿ ಅರವಿಂದ ಟ್ರಸ್ಟ್ ಸಂಸ್ಥೆಯು ಒಂಬತ್ತನೆ ತರಗತಿ ವಿದ್ಯಾರ್ಥಿಗಳಿಗೆ ಒಂದು ಶೈಕ್ಷಣಿಕ ವರ್ಷಕ್ಕೆ ಬೇಕಾಗುವ ನೋಟ್ ಪುಸ್ತಕಗಳನ್ನು ಉಚಿತವಾಗಿ ವಿತರಣೆ ಮಾಡುವ ಕಾರ್ಯಕ್ರಮ ಉದ್ದೇಶಿಸಿ ಅವರು ಮಾತನಾಡುತ್ತಿದ್ದರು.

ಖಾಲಿ ನೋಟ್ ಪುಸ್ತಕದಲ್ಲಿ ಬರೆದುದು ಕೇವಲ ಅಕ್ಷರಗಳಾಗಿರದೆ ಬದುಕು ರೂಪಿಸುವ ಜ್ಞಾನವಾಗಿರುತ್ತದೆ. ಈ ನೋಟ್ ಪುಸ್ತಕವನ್ನು ಶಿಸ್ತುಬದ್ಧವಾಗಿ ಇರಿಸಿಕೊಳ್ಳುವುದು




ತುಂಬಾ ಮುಖ್ಯ. ನಮ್ಮ ಸಂಸ್ಥೆ ಈ ವರ್ಷ ಒದಗಿಸಿದ ನೋಟ್ ಪುಸ್ತಕಗಳನ್ನು ಹಾಳು ಮಾಡದೆ, ಪರಿಪೂರ್ಣ ರೀತಿಯಲ್ಲಿ ಬಳಸಿಕೊಂಡ ವಿದ್ಯಾರ್ಥಿಗಳಿಗೆ ಬಹುಮಾನ ಕೊಡುವ ಹೊಸ ಯೋಜನೆಯನ್ನು ರೂಪಿಸಿದೆ ಎಂದು ಘೋಷಿಸಿದರು.

ಸಂಸ್ಥೆಯ ಹೆಚ್.ಆರ್. ಸುಮಾ ಮಾತನಾಡಿ, ನಮ್ಮ ಸಂಸ್ಥೆಯ ಉದ್ಯೋಗಿಗಳು ಸೇರಿ ರೂಪಿಸಿರುವ ಅರವಿಂದ ಟ್ರಸ್ಟ್ ವಿಶಿಷ್ಟವಾದುದು. ತಮ್ಮ ವೇತನದಲ್ಲಿ ಅವರು ಒಂದು ಭಾಗವನ್ನು ಉಳಿತಾಯ ಮಾಡಿ ಅದರ ಆಧಾರದಲ್ಲಿ ಸಮಾಜಮುಖಿ ಚಟುವಟಿಕೆಯಲ್ಲಿ ತೊಡಗಿಸಿಕೊಂಡಿದ್ದಾರೆ. ಬಡಮಕ್ಕಳಿಗೆ ಉಚಿತ ನೋಟ್‌ಪುಸ್ತಕಗಳನ್ನು ವಿತರಿಸುವುದು, ಉದ್ಯೋಗಿಗಳ ಕುಟುಂಬದಲ್ಲಿನ ಸದಸ್ಯರು ಅನಾರೋಗ್ಯಕ್ಕೊಳಗಾದರೆ ಅವರಿಗೆ ಆರ್ಥಿಕ ಬೆಂಬಲ ಕೊಡುವಂತಹ ಕೆಲಸವನ್ನೂ ಈ ಟ್ರಸ್ಟ್ ಮಾಡುತ್ತದೆ. ಹಿಂದಿನ ವರ್ಷ ನಾವು ಆರು ಸಾವಿರ ನೋಟ್ ಪುಸ್ತಕಗಳನ್ನು ಹಂಚಿದ್ದೆವು. ಈ ಬಾರಿ ಹತ್ತು ಸಾವಿರ ನೋಟ್ ಪುಸ್ತಕಗಳನ್ನು ವಿತರಿಸಲು ಸಜ್ಜಾಗಿದ್ದೇವೆ ಎಂದು ತಿಳಿಸಿದರು. ಇಕ್ಕೇರಿ ವಿದ್ಯಾಸಂಸ್ಥೆಯ ಅಧ್ಯಕ್ಷ ಎಸ್.ಟಿ.ರತ್ನಾಕರ್ ಅಧ್ಯಕ್ಷತೆ ವಹಿಸಿದ್ದರು. ಶಿಕ್ಷಣ ತಜ್ಞ ನಾರಾಯಣಮೂರ್ತಿ ಪಿ.ಡಿ., ಅರವಿಂದ ಟ್ರಸ್ಟ್‌ನ ಎಂ.ಎಸ್. ರಮೇಶ್, ಅರ್ಜುನ್, ಇಕ್ಕೇರಿ ಪ್ರೌಢಶಾಲೆಯ ಮುಖ್ಯ ಶಿಕ್ಷಕ ರಜನೀಶ್ ಸಿ. ಇನ್ನಿತರರು ಇದ್ದರು. ಟಿ.ಎಸ್.ತಿಲಕಾಂಬಾ ಸ್ವಾಗತಿಸಿದರು. ಉಮೇಶ್ ವಂದಿಸಿದರು. ಎಸ್.ಜಿ.ಶ್ರೀಕಾಂತ್ ಹಾಗೂ ರಾಮಚಂದ್ರ ಹೆಗಡೆ ನಿರೂಪಿಸಿದರು.

# ಭಾರತೀಯ ರೈಲ್ವೆ ಇಲಾಖೆಯಲ್ಲಿ 18,799 ಹುದ್ದೆಗಳ ಭರ್ತಿಗೆ ಅರ್ಜಿ ಆಹ್ವಾನ

ಬೆಂಗಳೂರು: ಸುರಕ್ಷತೆಯನ್ನು ಹೆಚ್ಚಿಸುವ ಪ್ರಯತ್ನದ ಭಾಗವಾಗಿ ಭಾರತೀಯ ರೈಲ್ವೇ ಮುಂದಿನ ಆರರಿಂದ ಎಂಟು ತಿಂಗಳಲ್ಲಿ 18,799 ಸಹಾಯಕ ಲೋಕೋ ಪೈಲಟ್‌ಗಳನ್ನು ನೇಮಿಸಿಕೊಳ್ಳುವುದಾಗಿ ಘೋಷಿಸಿದೆ.

ಜೂನ್ 18 ರಂದು ಇಲಾಖೆ 5,696 ಖಾಲಿ ಹುದ್ದೆಗಳ ಭರ್ತಿಗೆ ಸೂಚನೆ ನೀಡಿದೆ.

ಆದಾಗ್ಯೂ, ಈಗ 18,799 ಸಹಾಯಕ ಲೋಕೋ ಪೈಲಟ್‌ಗಳನ್ನು ನೇಮಿಸಿಕೊಳ್ಳಲು ನಿರ್ಧರಿಸಿದೆ. ಸುತ್ತೋಲೆಯಲ್ಲಿ ರೈಲ್ವೇ ಮಂಡಳಿಯು ಈ ನಿರ್ಧಾರವನ್ನು ತಕ್ಷಣವೇ ಪ್ರಕ್ರಿಯೆಗೊಳಿಸುವಂತೆ ವಲಯ ರೈಲ್ವೆಗಳಿಗೆ ಹೇಳಿದೆ.

ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕನಿಷ್ಠ ಆರು ತಿಂಗಳು ತೆಗೆದುಕೊಳ್ಳುತ್ತದೆ ಎಂದು



ನಿರೀಕ್ಷಿಸಲಾಗಿದೆ. ಏಕೆಂದರೆ ಪೋಸ್ಟ್‌ಗಳನ್ನು ಅಧಿಸೂಚನೆ ಮಾಡಬೇಕಾಗಿದೆ ಮತ್ತು ಅಭ್ಯರ್ಥಿಗಳು ಲಿಖಿತ, ಯೋಗ್ಯತೆ ಮತ್ತು ವೈದ್ಯಕೀಯ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕಾಗುತ್ತದೆ. ಸಹಾಯಕ ಲೋಕೋ ಪೈಲಟ್‌ಗಳ ನೇಮಕಾತಿಯು ನುರಿತ ಮಾನವಶಕ್ತಿಯ ಅಗತ್ಯವನ್ನು ಪೂರೈಸಲು ಸಹಾಯ ಮಾಡುತ್ತದೆ ಎಂದು ರೈಲ್ವೆ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ರೈಲು ಕಾರ್ಯಾಚರಣೆಯ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡುತ್ತಿದೆ ಎಂದು ಸರ್ಕಾರದ ಒತ್ತಾಯದ ಹೊರತಾಗಿಯೂ, ಸುರಕ್ಷತಾ ವಿಭಾಗದ ಅಡಿಯಲ್ಲಿ ಮಂಜೂರಾದ ಸುಮಾರು 10 ಲಕ್ಷ ಹುದ್ದೆಗಳಲ್ಲಿ, ಈ ವರ್ಷದ ಮಾರ್ಚ್‌ವರೆಗೆ 1.5 ಲಕ್ಷಕ್ಕೂ ಹೆಚ್ಚು ಹುದ್ದೆಗಳು ಖಾಲಿ ಇವೆ.

ಸುರಕ್ಷತಾ ವರ್ಗದ ಹುದ್ದೆಗಳಲ್ಲಿ ರೈಲು ಚಾಲಕರು, ಇನ್ಸ್‌ಪೆಕ್ಟರ್‌ಗಳು, ಸಿಬ್ಬಂದಿ ನಿಯಂತ್ರಕರು, ಲೊಕೊ ಬೋಧಕರು, ರೈಲು ನಿಯಂತ್ರಕರು, ಟ್ರ್ಯಾಕ್ ನಿರ್ವಾಹಕರು, ಸ್ಟೇಷನ್ ಮಾಸ್ಟರ್‌ಗಳು, ಪಾಯಿಂಟ್‌ಮೆನ್, ಎಲೆಕ್ಟ್ರಿಕ್ ಸಿಗ್ನಲ್ ನಿರ್ವಾಹಕರು ಮತ್ತು ಸಿಗ್ನಲಿಂಗ್ ಮೇಲ್ವಿಚಾರಕರು, ಇತ್ಯಾದಿ ಖಾಲಿ ಇವೆ.

ಮಾಹಿತಿ ಹಕ್ಕು ಕಾಯಿದೆಯಡಿ ಅರ್ಜಿಯೊಂದಕ್ಕೆ ರೈಲ್ವೆ ಸಚಿವಾಲಯದ ಪ್ರತಿಕ್ರಿಯೆಯಂತೆ, "01.03.2024 ರಂತೆ ಈ ಕಛೇರಿಯಲ್ಲಿ ಲಭ್ಯವಿರುವಂತೆ ಭಾರತೀಯ ರೈಲ್ವೆಯ ಸುರಕ್ಷತಾ ವರ್ಗದಲ್ಲಿ ಮಂಜೂರಾದ ಆನ್ ರೋಲ್ (ಕೆಲಸ ಮಾಡುವ) ಮತ್ತು ಖಾಲಿ ಇರುವ ಹುದ್ದೆಗಳ ಒಟ್ಟು ಸಂಖ್ಯೆ ತಾತ್ಕಾಲಿಕ) ಕ್ರಮವಾಗಿ 10,00,941, 8,48,207 ಮತ್ತು 1,52,734. ಖಾಲಿ ಇರುವ ಲೋಕೋ ಪೈಲಟ್‌ಗಳ (ಮೇಲ್/ಎಕ್ಸ್‌ಪ್ರೆಸ್/ಪ್ಯಾಸೆಂಜರ್/ಗೂಡ್ಸ್/ಷಂಟಿಂಗ್) ಹುದ್ದೆಗಳ ಕುರಿತು ರೈಲ್ವೆ ಸಚಿವಾಲಯವು ಒಟ್ಟು ಮಂಜೂರಾದ 70,093 ಹುದ್ದೆಗಳಲ್ಲಿ 14,429 ಖಾಲಿ ಇವೆ ಎಂದು ಹೇಳಿದೆ.

ಆದಾಗ್ಯೂ, 2014-24ರ ಅವಧಿಯಲ್ಲಿ ಸುರಕ್ಷತೆಗೆ ಸಂಬಂಧಿಸಿದ ಯೋಜನೆಗಳಲ್ಲಿ ಹೂಡಿಕೆ 1,78,000 ಕೋಟಿ ರೂ.ಗಳಾಗಿದ್ದು, 2004-14ರ ಅವಧಿಯಲ್ಲಿ 70,273 ಕೋಟಿ ರೂ.ಗಳ ಹೂಡಿಕೆಯ 2.5 ಪಟ್ಟು ಹೆಚ್ಚಾಗಿದೆ ಎಂದು ಹಿರಿಯ ರೈಲ್ವೆ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

# ಉಚಿತ ಆರೋಗ್ಯ ತಪಾಸಣಾ ಶಿಬಿರ

ಪುಟ 1ರಿಂದ

ಸಹಯೋಗದೊಂದಿಗೆ ಶ್ರೀ ಶ್ರೀ ಶ್ರೀ ನಿರ್ಮಲಾನಂದನಾಥ ಮಹಾ ಸ್ವಾಮೀಜಿಯವರ ಕೃಪಾಶೀರ್ವಾದಗಳೊಂದಿಗೆ ನುರಿತ ತಜ್ಞ ವೈದ್ಯರಿಂದ ಉಚಿತ ಆರೋಗ್ಯ ತಪಾಸಣಾ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದ ಶಾಸಕ ಹೆಚ್.ಟಿ ಮಂಜು ಇಂತಹ ಉಚಿತ ಆರೋಗ್ಯ ಶಿಬಿರ ಹಳ್ಳಿಗಳಲ್ಲಿ ಹೆಚ್ಚು ನಡೆಯಬೇಕು ಇದರಿಂದ ಗ್ರಾಮಾಂತರ ಪ್ರದೇಶದ ಜನಸಾಮಾನ್ಯರಿಗೆ ಆರೋಗ್ಯದ ಬಗ್ಗೆ ಅರಿವು ಮೂಡಿಸಲು ಸಾಧ್ಯ. ಗ್ರಾಮೀಣ ಪ್ರದೇಶದ ಜನರ ಆರೋಗ್ಯ ಕಾಪಾಡುವ ಹಿತದೃಷ್ಟಿಯಿಂದ ಈ ಆರೋಗ್ಯ ಶಿಬಿರ ಸಹಕಾರಿಯಾಗಿದೆ.

ಪ್ರತಿಯೊಬ್ಬರೂ ಆರೋಗ್ಯ ಕಾಪಾಡಿಕೊಂಡು ಜೀವನ ಶೈಲಿ ಸಾಧ್ಯವಾದಷ್ಟು ಬದಲಾವಣೆ ಮಾಡಿಕೊಳ್ಳುವುದು ಉತ್ತಮ ಎಂದು ಅಭಿಪ್ರಾಯಪಟ್ಟರು.

ಮಾಜಿ ಸಚಿವ ಕೆ.ಸಿ ನಾರಾಯಣಗೌಡ ಮಾತನಾಡಿ ಇತ್ತೀಚಿನ ದಿನಗಳಲ್ಲಿ ಪ್ರತಿಯೊಬ್ಬರಿಗೂ ಬಿಪಿ, ಶುಗರ್, ಹೃದ್ರೋಗ ಹಾಗೂ ಕಿಡ್ನಿ ಕಾಯಿಲೆಗಳು ಸಾಮಾನ್ಯವಾಗಿವೆ. ಇವು ಶ್ರೀಮಂತಖಾಯಿಲೆಗಳಾಗಿದ್ದು, ಬಡಜನರು ಆರ್ಥಿಕವಾಗಿ ಭರಿಸಲು ಅಸಾಧ್ಯ. ಗ್ರಾಮೀಣ ಭಾಗದ ಹಾಗೂ ನಗರ ಪ್ರದೇಶದ ಬಡ ಜನರಿಗೆ ಇಂತಹ ಉಚಿತ ಶಿಬಿರಗಳ ಮೂಲಕವೇ ಚಿಕಿತ್ಸೆಗೊಳಪಡಿಸಿದಾಗ ಮಾತ್ರ ಅವರನ್ನು ಸಂಕಷ್ಟದಿಂದ ಪಾರು ಮಾಡಲು ಸಾಧ್ಯ. ನಾನು ಕೂಡ ಗ್ರಾಮೀಣ ಹಳ್ಳಿ ಹಿನ್ನೆಲೆಯಿಂದ ಬಂದಿದ್ದೇನೆ.

ಬಡತನದ ಪರಿಚಯವೂನನಗೆ ಇದ್ದು ಒಂದು ಉನ್ನತ ಸ್ಥಾನದ ಹೊಣೆ ಹೊಂದಿದ ಮೇಲೆ ಬಡ ಜನರ ಸೇವೆಯನ್ನು ಅವರ ಋಣವನ್ನು ತೀರಿಸಲ್ಲೂ ನನ್ನ ಅಧಿಕಾರ ಅವಧಿಯ ದಿನಗಳಲ್ಲಿ ಈ ರೀತಿಯ ಆರೋಗ್ಯ ಶಿಬಿರಗಳ ಮೂಲಕವೇ ತೀರಿಸಿದ್ದೇನೆ.ಆ ಮಾದರಿಯಲ್ಲೆ ನಮ್ಮ ಮುಖಂಡ ಎಂ ಡಿ ಸಿ ಸಿ ಮಾಜಿ ಅಧ್ಯಕ್ಷ ವಿ. ಡಿ ಹರೀಶ್ ಮತ್ತು ವಿ.ಡಿ ಮೋಹನ್ ಅವರು ಅವರ ತಂದೆ ಮೂರನೇ ಪುಣ್ಯ ಸ್ಮರಣೆ ದಿನದ ಅಂಗವಾಗಿ ಉಚಿತ ಅರೋಗ್ಯ ಶಿಬಿರ ಆಯೋಜಿಸಿರುವುದು ನಿಜಕ್ಕೂ ಶ್ಲಾಘನೀಯ, ಈಗಿನ ಯುವಕರು ತಮ್ಮ-ತಂದೆ ತಾಯಿಯ ಗೌರವಿಸಿದರೆ ಮಾತ್ರ ಅವರ ಜೀವನದಲ್ಲಿ ಯಶಸ್ವಿ ಮೆಟ್ಟಿಲು ಸಾಧ್ಯ ಎಂದರು.

ಬಳಿಕ ಮಾತನಾಡಿದ ಮಾಜಿ ಶಾಸಕ ಬಿ.ಪ್ರಕಾಶ್ ಗ್ರಾಮೀಣದ ಜನರು ತಮ್ಮ ಕೃಷಿ ಚಟುವಟಿಕೆ ಒತ್ತಡದಲ್ಲಿ ಆರೋಗ್ಯದ ಬಗ್ಗೆ ಕಾಳಜಿ ವಹಿಸಿದೇರುವ ಗ್ರಾಮೀಣ ಜನರ ಆರೋಗ್ಯ ರಕ್ಷಣೆಗೆ ಉಚಿತ ಆರೋಗ್ಯ ಶಿಬಿರಗಳು ಸಹಕಾರಿಯಾಗಿವೆ.

ಗ್ರಾಮಗಳಲ್ಲಿ ಸಾಯೋಜಿಸಿರುವ ಶಿಬಿರಗಳ ಪ್ರಯೋಜನವನ್ನು ಪ್ರತಿಯೊಬ್ಬರು ಭಾಗಿಯಾಗಿ ಹಲವಾರು ಕಾಯಿಲೆಗಳನ್ನು ಪ್ರಾರಂಭದಲ್ಲೇ ಪತ್ತೆ ಹಚ್ಚಿದರೆ ಸುಲಭವಾಗಿ ರೋಗ ಗುಣಪಡಿಸಬಹುದು.ಬದಲಾಗುತ್ತಿರುವ ಜೀವನಶೈಲಿ,ಆಹಾರ ಪದ್ಧತಿ ಹಾಗೂ ಒತ್ತಡದ ದೈನಂದಿನ ಬದುಕಿನ ದಿನಗಳ ಮದ್ಯೆ ಜನರಲ್ಲಿ ಆರೋಗ್ಯ ಸಮಸ್ಯೆಗಳು ದಿನದಿಂದ ದಿನಕ್ಕೆ ಹೆಚ್ಚುತ್ತಿವೆ ಇವುಗಳ ನಿವಾರಣೆಗೆ ಉಚಿತ ಆರೋಗ್ಯ ತಪಾಸಣಾ ಶಿಬಿರ ಸಹಕಾರಿಯಾಗುತ್ತದೆ ಎಂದರು.

ಶಿಬಿರಕ್ಕೆ ಆಗಮಿಸಿದ ಸಾವಿರಾರು ಸಾರ್ವಜನಿಕರಿಗೆ ಮತ್ತು ರೋಗಿಗಳಿಗೆ ವಿ.ಡಿ.ಡಿ ಕುಟುಂಬ ಊಟದ ವೆವಸ್ಥೆ ಆಯೋಜಿಸಿದರು.

ಕಾರ್ಯಕ್ರಮದಲ್ಲಿ ಟಿ.ಎ.ಪಿ.ಸಿ.ಎಂ.ಎಸ್ ಅಧ್ಯಕ್ಷ ಬಿ. ಎಲ್ ದೇವರಾಜು,ಮಂಡ್ಯ ಜಿಲ್ಲಾ ಹಾಲು ಒಕ್ಕೂಟ ನಿರ್ದೇಶಕ ಡಾಲು ರವಿ,ಮಂಡ್ಯ ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಶೀಳನೆರೆ ಅಂಬರೀಷ್,ಕೆ. ಪಿ ಸಿ ಸಿ ಸದಸ್ಯ ಕಿಕ್ಕೇರಿ ಸುರೇಶ್,ಸಮಾಜ ಸೇವಕ ಆರ್ ಟಿ ಓ ಮಲ್ಲಿಕಾರ್ಜುನ್, ಕಾಂಗ್ರೆಸ್ ಮುಖಂಡ ಬೂಕನಕೆರೆ ವಿಜಯ ರಾಮೇಗೌಡ,ಮೂಡ ಮಾಜಿ ಅಧ್ಯಕ್ಷ ಕೆ ಶ್ರೀನಿವಾಸ್,ಜೆಡಿಎಸ್ ಅಧ್ಯಕ್ಷ ಎ. ಎನ್ ಜಾನಕಿರಾಮ್,

ಜೆಡಿಎಸ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಿ.ಎಂ ಕಿರಣ್,ಮನ್ಮುಲ್ ಮಾಜಿ ನಿರ್ದೇಶಕ ಕೆ.ಜಿ ತಮ್ಮಣ್ಣ,ತಾ. ಪಂ ಮಾಜಿ ಅಧ್ಯಕ್ಷ ಜವರಹಿಗೌಡ, ಕೃಷ್ಣ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಗುಡ್ಡೆಹೊಸಹಳ್ಳಿ ಜವರೇಗೌಡ, ಪುರಸಭಾ ಮಾಜಿ ಅಧ್ಯಕ್ಷ ಕೆ.ಟಿ ಗಂಗಾಧರ್,ಮುಖಂಡ ಕೋಟಹಳ್ಳಿ ಶ್ರೀನಿವಾಸ್,ವಿಠಲಪುರ ಗ್ರಾ.ಪಂ ಅಧ್ಯಕ್ಷ ಕುಮಾರ್,ಜೆಡಿಎಸ್ ಮುಖಂಡ ನಾಟನಹಳ್ಳಿ ಸಾಗರ್, ಶಿಕ್ಷಕ ಅಲಂಬಾಡಿ ಕಾವಲು ದೇವರಾಜು, ಕಾಪನಹಳ್ಳಿ ಹರೀಶ್,ಎಂಡಿಸಿಸಿ ಬ್ಯಾಂಕ್ ಮಾಜಿ ಅಧ್ಯಕ್ಷ ವಿ. ಡಿ ಹರೀಶ್, ವಿ.ಡಿ ಮೋಹನ್,ಆದಿಚುಂಚನಗಿರಿ ವೈದ್ಯಕೀಯ ಮಹಾವಿದ್ಯಾಲಯ ವೈದ್ಯ ವೃಂದ ಸೇರಿದಂತೆ ಸಾವಿರಾರು ಸಾರ್ವಜನಿಕರು ಇದ್ದರು.

ಸುದ್ದಿಯೊಂದಿಗೆ ಮನು
ಮಾಕವಳ್ಳಿ ಕೆ ಆರ್ ಪೇಟೆ

## ನಿರಂತರವಾಗಿ ವಿವಿಧ ವಸ್ತುಗಳ ಬೆಲೆ ಏರಿಕೆ: ಮಾಜಿ ಸಚಿವ ಕೆ.ಸಿ.ನಾರಾಯಣಗೌಡ

ಪುಟ 1ರಿಂದ

ಏರಿಕೆಯಾಗುತ್ತಿರುವುದರಿಂದಾಗಿ ರಾಜ್ಯದಲ್ಲಿ ಜನಸಾಮಾನ್ಯರು ಬದುಕುವುದು ಕಷ್ಟ ಎನ್ನುವ ಸ್ಥಿತಿ ನಿರ್ಮಾಣವಾಗಿದೆ.

ಆದರೆ ರಾಜ್ಯದಲ್ಲಿರುವ ಕಾಂಗ್ರೆಸ್ ಸರ್ಕಾರ ಇದರ ಬಗ್ಗೆ ತಲೆಕೆಡಿಸಿಕೊಳ್ಳದೆ ನಿರಂತರವಾಗಿ ಬೆಲೆ ಏರಿಕೆ ಮಾಡುವುದನ್ನೇ ತನ್ನ ನೀತಿಯನ್ನಾಗಿಸಿ ಕೊಂಡಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ರಾಜ್ಯ ಸರ್ಕಾರದ ದುರಾಡಳಿತ ತುಂಬಾ ದಿನ ನಡೆಯುವುದಿಲ್ಲ. ಜನಸಾಮಾನ್ಯರು ಎಚ್ಚೆತ್ತುಕೊಂಡು ಸರ್ಕಾರಕ್ಕೆ ಬುದ್ಧಿ ಕಲಿಸುವ ಕೆಲಸ ಮಾಡಬೇಕು ಎಂದು ಕರೆ ನೀಡಿದರು.

ಬಳಿಕ ಬಿಜೆಪಿ ತಾಲ್ಲೂಕು ಅಧ್ಯಕ್ಷ ಸಾರಂಗಿ ನಾಗಣ್ಣ ಮಾತನಾಡಿ, ಭ್ರಷ್ಟ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ತಿಂಗಳುಗಳಲ್ಲಿ ಹಲವು ಬಾರಿ ಬೆಲೆ ಏರಿಕೆ ಮಾಡಲಾಗಿದೆ. ಪ್ರತಿಯೊಂದು ವಸ್ತುಗಳ ಬೆಲೆಯನ್ನು ಏರಿಕೆ ಮಾಡಿ ರೈತರು ಹಾಗೂ ಜನಸಾಮಾನ್ಯರಿಗೆ ಬರೆ ಎಳೆಯುವ ಕೆಲಸ ಮಾಡಲಾಗಿದೆ. ಛಾಪ ಕಾಗದ ಹಾಗೂ ಪಹಣಿ ಬೆಲೆಯನ್ನು ಏರಿಕೆ ಮಾಡುವ ಮೂಲಕ ಜನ ವಿರೋಧಿ ನೀತಿ ಅನುಸರಿಸಲಾಗುತ್ತಿದೆ ಎಂದು ದೂರಿದರು.

ಪ್ರತಿಭಟನೆಯಲ್ಲಿ ಮೂಡ ಮಾಜಿ ಅಧ್ಯಕ್ಷ ಶ್ರೀನಿವಾಸ್, ಮಾಜಿ ಪುರಸಭಾ ಸದಸ್ಯ ವಿನೋದ್ ಕುಮಾರ್,ಉಪಾಧ್ಯಕ್ಷ ಕುರ್ನೇನಹಳ್ಳಿ ನವೀನ್,ಭಾರತೀಪುರ ಪುಟ್ಟಣ್ಣ,ಪ್ರಧಾನ ಕಾರ್ಯದರ್ಶಿಗಳಾದ ಚೋಕನಹಳ್ಳಿ ಪ್ರಕಾಶ್,ಬಿಜೆಪಿ ರೈತ ಮೋರ್ಚಾ ಅಧ್ಯಕ್ಷ ಹೊಸಹೊಳಲು ಯೋಗೇಶ್ ಗೌಡ,ಸಿಂಗನಹಳ್ಳಿ ರವಿ, ಜಿಲ್ಲಾ ನೇಕಾರ ಪ್ರಕೋಷ್ಟ ಜಿಲ್ಲಾದ್ಯಕ್ಷ ಬಿಗ್ ಬಾಸ್ ಮೋಹನ್

ಎಸ್ಸಿ ಮೋರ್ಚಾ ತಾಲ್ಲೋಕು ಅಧ್ಯಕ್ಷ ಜೆ.ಪಿ ರಾಜು,ಒಬಿಸಿ ಮೋರ್ಚಾ ಅಧ್ಯಕ್ಷ ಹಾದನೂರು ಮಂಜು, ಯುವಮೋರ್ಚಾ ಅಧ್ಯಕ್ಷ ಐಕನಹಳ್ಳಿ ರಾಜು,ತಾಲ್ಲೋಕು ಮಹಿಳಾ ಮೋರ್ಚಾ ಅಧ್ಯಕ್ಷೆ ವಿಜಿಯಮ್ಮ,ನಗರ ಘಟಕ ಮಹಿಳಾ ಮೋರ್ಚಾ ಅಧ್ಯಕ್ಷೆ ಚಂದ್ರಕಲಾ ರಮೇಶ್,ಮಹಿಳಾ ಮುಖಂಡರಾದ ಮಣಿ,ಶಿಲ್ಪಾ,ಭಾರತೀಪುರ ಶ್ರೀನಿವಾಸ್,ಬಿಜೆಪಿ ಕಾರ್ಯಕರ್ತರು ಸೇರಿದಂತೆ ಉಪಸ್ಥಿತರು ಭಾಗವಹಿಸಿದರು.

ಸುದ್ದಿಯೊಂದಿಗೆ ಮನು
ಮಾಕವಳ್ಳಿ ಕೆ ಆರ್ ಪೇಟೆ

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ-ಪೇಪರ್: www.munjanevarth.com
ಶುಕ್ರವಾರ 21 ಜೂನ್ 2024
FRIDAY 21 June 2024

# ಶ್ರೀ ಮಾತೃಭೂಮಿ ವೃದ್ಧಾಶ್ರಮದ ವೃದ್ಧರಿಗೆ ಅನ್ನ ಸಂತರ್ಪಣೆ

ಕೆ.ಆರ್.ಪೇಟೆ : ಅಖಿಲ ಭಾರತ ವೀರಶೈವ ಲಿಂಗಾಯಿತ ಮಹಾಸಭಾ ತಾಲ್ಲೂಕು ಅಧ್ಯಕ್ಷ ವಿ.ಎಸ್ ಧನಂಜಯ್ ಕುಮಾರ್ ಅವರ 46ನೇ ವರ್ಷದ ಹುಟ್ಟುಹಬ್ಬದ ಪ್ರಯುಕ್ತವಾಗಿ ಅವರ ಅಭಿಮಾನಿಗಳು ಮತ್ತು ಹಿತೈಷಿಗಳಿಂದ ಕೆ.ಆರ್. ಪೇಟೆ ಪಟ್ಟಣದ ಹೊರವಲದಲ್ಲಿರುವ ಶ್ರೀ ಮಾತೃಭೂಮಿ ವೃದ್ಧಾಶ್ರಮದ ವೃದ್ಧರಿಗೆ ಅನ್ನ ಸಂತರ್ಪಣೆ ಹಾಗೂ ಗಿಡ ನೆಟ್ಟು ಅರ್ಥಪೂರ್ಣವಾಗಿ ಆಚರಿಸಲಾಯಿತು.



ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಮಂಡ್ಯ ಜಿಲ್ಲಾ ಹಾಲು ಒಕ್ಕೂಟದ ನಿರ್ದೇಶಕ ಕೆ. ರವಿ (ಡಾಲು ರವಿ) ವಕೀಲ ವಿ.ಎಸ್ ದನಂಜಯ ಕುಮಾರ್ ರವರು ತಮ್ಮ ಹುಟ್ಟುಹಬ್ಬವನ್ನು ಆಡಂಬರದ ಮೋಜು ಮಸ್ತಿಗೆ ಹಣ ವ್ಯಯಿಸದೆ ತಮ್ಮ ಹುಟ್ಟು ಹಬ್ಬದ ದಿನವೂ ವೃದ್ಧಾಶ್ರಮದಲ್ಲಿರುವ ವೃದ್ಧರಿಗೆ ಅನ್ನ ಸಂತರ್ಪಣೆ ನೆರವೇರಿಸಿ ಆಶ್ರಮದ ಆವರಣದಲ್ಲಿ ಗಿಡ ನೆಟ್ಟು ಪರಿಸರ ಸ್ನೇಹಿ ಆಗುವ ಮೂಲಕ ಆಚರಿಸಿಕೊಳ್ಳುತ್ತಿರುವುದು ಉಳ್ಳವರಿಗೆ ಮಾದರಿಯಾಗಿದ್ದಾರೆ. ಜೀವನದುದ್ದಕ್ಕೂ ಸದೃಢ ಸಮಾಜದ ಬಗ್ಗೆ ಚಿಂತಿಸುತ್ತ ತನ್ನ ಸಮುದಾಯದ ಮುಖ್ಯ ವಾಹಿನಿಗೆ ತರಲು ಹಗಲು ಇರುಳು ಶ್ರಮಿಸುವುದರ ಜೊತೆಗೆ ಸರ್ವ ಧರ್ಮ ಮತ್ತು ಸಮುದಾಯಗಳ ಜನತೆಯ ವಿಶ್ವಾಸ ಪಡೆದಿರುವ ವಿ.ಎಸ್ ಧನಂಜಯ್ ಕುಮಾರ್ ಅವರಿಗೆ ಇನ್ನಷ್ಟು ಬಡಜನರ ಸೇವೆ ಮಾಡುವಂತ ಅವಕಾಶವನ್ನು ದೇವರು ಕರುಣಿಸಲಿ ಎಂದರು.

ಬಳಿಕ ಮಾತನಾಡಿದ ಶ್ರೀ ಸುಬ್ರಹ್ಮಣ್ಯ ಸೇವಾ ಟ್ರಸ್ಟ್ ಸಂಸ್ಥಾಪಕಧ್ಯಕ್ಷ ಆನೆಗೋಳ ಕಿರಣ್ ಮಾತನಾಡಿ ವಿ.ಎಸ್ ಧನಂಜಯ್ ಕುಮಾರ್ ಒಬ್ಬ ಕ್ರಿಯಾಶೀಲ ಸಮಾಜ ಸೇವಕ ಅವರು ನಿರ್ವಹಿಸುವ ಕಾರ್ಯಕ್ರಮವು ಅರ್ತಪೂರ್ಣವಾಗಿರುತ್ತವೆ, ವೃತ್ತಿಯಲ್ಲಿ ವಕೀಲರಾದರು ಸಾರ್ವಜನಿಕರ ಬದುಕಿಗೆ ಶ್ರಮಿಸುವ ಚಿಂತನೆ ಹೆಚ್ಚು. ತನ್ನ ಸಮಾಜದ ಏಳಿಗೆಗಾಗಿ ಅಪಾರ ಪರಿಶ್ರಮವ ಪಡುವ ವ್ಯಕ್ತಿ, ಆದರೂ ತನ್ನ ಹುಟ್ಟುಹಬ್ಬ ಆಚರಣೆ ದಿನವೆ ವೃದ್ಧರ ಜೊತೆಗೂಡಿ ಪ್ರೀತಿ ವಾತ್ಸಲ್ಯದಿಂದ ಉಪಹಾರ ಸೇವಿಸಿ ತಮ್ಮ ಹುಟ್ಟುಹಬ್ಬ ಆಚರಿಸುತ್ತಿರುವುದು ನಿಜಕ್ಕೂ ಮಾನವ ಕುಲವ ಮೆಚ್ಚುವಂತಹ ಕಾರ್ಯ ಎಂದು ಶ್ಲಾಘನೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಜೆಡಿಎಸ್ ಮುಖಂಡ ಮುರಳಿಧರ್, ಅಖಿಲ ಭಾರತ ವೀರಶೈವ ಲಿಂಗಾಯಿತ ಮಹಾಸಭಾ ತಾಲ್ಲೋಕು ಅಧ್ಯಕ್ಷ ವಿ.ಎಸ್ ಧನಂಜಯ್ ಕುಮಾರ್, ಅಕ್ಕಿಹೆಬ್ಬಾಳು ಹೋಬಳಿಯ ಜೆಡಿಎಸ್ ಅಧ್ಯಕ್ಷ ಬಸವಲಿಂಗಪ್ಪ, ಮಾಕವಳ್ಳಿ ನಾಗೇಶ್,ಲಿಂಗಾಪುರ ಹರೀಶ್, ಗೋವಿಂದಹಳ್ಳಿ ಡಿಸ್ ಗುಂಡ, ಸಚಿನ್, ಚೌಡಸಮುದ್ರ ಹಾಲು ಉತ್ಪಾದಕರ ಸಹಕಾರ ಸಂಘದ ನಿರ್ದೇಶಕ ಹರೀಶ್, ಲಿಂಗಾಪುರ ಯಡಿಯೂರಪ್ಪ,ಓಂಕಾರಪ್ಪ,ವಡ್ಡರಹಳ್ಳಿ ಪಟೇಲ್ ಮಧು, ಶ್ರೀ ಮಾತೃಭೂಮಿ ವೃದ್ಧಾಶ್ರಮದ ವ್ಯವಸ್ಥಾಪಕ ನಾಗಣ್ಣ,ವಿ.ಎಸ್ ಧನಂಜಯ್ ಕುಮಾರ್ ಅಭಿಮಾನಿಗಳು ಹಿತೈಷಿಗಳು ಸೇರಿದಂತೆ ಇತರರು ಭಾಗವಹಿಸಿದ್ದರು

ಸುದ್ದಿಯೊಂದಿಗೆ ಮನು ಮಾಕವಳ್ಳಿ ಕೆ ಆರ್ ಪೇಟೆ

# ವರದಕ್ಷಿಣೆ ನೀಡಿಲವೆಂದು ಅತ್ತೆ ಕೈಮುರಿದು ಬೈಕ್ ಬೆಂಕಿ ಹಾಕಿದ ಅಳಿಯ



ಚಾಮರಾಜನಗರ: ಪತ್ನಿಗೆ ವರದಕ್ಷಿಣೆ ತರುವಂತೆ ಪತಿಯೊಬ್ಬ ಪದೇ ಪದೇ ಪೀಡಿಸುತ್ತಿದ್ದ ಘಟನೆ ಚಾಮರಾಜನಗರದಲ್ಲಿ ನಡೆದಿದೆ. ವರದಕ್ಷಿಣೆಗಾಗಿ ಮಾವನ ಮನೆಯವರ ಜೊತೆ ಅಳಿಯ ಜಗಳ ಮಾಡಿಕೊಂಡು ಅತ್ತೆಯ ಕೈ ಮುರಿದು ಬೈಕ್ಗಳಿಗೆ ಬೆಂಕಿ ಹಚ್ಚಿ ಸುಟ್ಟು ಹಾಕಿರುವ ಘಟನೆ ಚಾಮರಾಜನಗರದ ಗಾಳಿಪುರ ಬಡಾವಣೆಯಲ್ಲಿ ನಡೆದಿದೆ. ಕಳೆದ 8 ತಿಂಗಳ ಹಿಂದೆ ಗಾಳಿಪುರ ಬಡಾವಣೆಯ ಹತೀಜಾ ಖೂಬ್ರಾಳನ್ನು ಚಾಮರಾಜನಗರ ತಾಲೂಕಿನ ಸರಗೂರಿನ ಸಲ್ಮಾನ್ ಅಹಮದ್ ಷರೀಫ್ ಎಂಬಾತನೊಂದಿಗೆ ವಿವಾಹ ಮಾಡಿಕೊಡಲಾಗಿತ್ತು.

ಆದರೆ ಕೆಲವು ದಿನಗಳ ನಂತರ ಪತ್ನಿಗೆ ವರದಕ್ಷಿಣೆ ತರುವಂತೆ ಸಲ್ಮಾನ್ ಅಹಮದ್ ಷರೀಫ್ ದೈಹಿಕ ಹಾಗು ಮಾನಸಿಕ ಕಿರುಕುಳ ನೀಡುತ್ತಿದ್ದ ಎನ್ನಲಾಗಿದೆ. ಇದರಿಂದ ಬೇಸತ್ತ ಮಾವನ ಮನೆಯವರು ವರದಕ್ಷಿಣೆ ಕಿರುಕುಳದ ಬಗ್ಗೆ ಕೆಲ ತಿಂಗಳ ಹಿಂದೆ ಪಟ್ಟಣ ಪೊಲೀಸ್ ಠಾಣೆಗೆ ದೂರು ನೀಡಿದರು ಯಾವುದೇ ನ್ಯಾಯ ಸಿಗಲಿಲ್ಲ ಎಂದು ಹತೀಜಾ ಖೂಬ್ರಾ ಆರೋಪಿಸಿದ್ದಾರೆ. ಇನ್ನೂ ನಿನ್ನೆ ರಾತ್ರಿ ಪತ್ನಿಯ ಮನೆಗೆ ಬಂದಿದ್ದ ಸಲ್ಮಾನ್ ಅಹಮದ್ ಷರೀಫ್ ಹಣ ಕೊಡುವಂತೆ ಪತಿಯ ಕುಟುಂಬಸ್ಥರನ್ನು ಕೇಳಿದ್ದಾನೆ. ನಮ್ಮ ಬಳಿ ಯಾವುದೇ ಹಣವಿಲ್ಲವೆಂದು ಪತ್ನಿಯ ಮನೆಯವರು ಹೇಳುತ್ತಿದ್ದಂತೆ ಜಗಳ ತೆಗೆದು ಮನೆಯ ಮುಂದೆ ನಿಲ್ಲಿಸಲಾಗಿದ್ದ ಎರಡು ಬೈಕ್ಗಳಿಗೆ ಬೆಂಕಿ ಹಚ್ಚಿ ಸುಟ್ಟು ಹಾಕಿದ್ದಾನೆ.

ಮಾವ ಹಾಗು ಅತ್ತೆಯೊಂದಿಗೆ ಗಲಾಟೆ ಮಾಡಿದ್ದಲ್ಲದೇ ದೊಣ್ಣೆಯಲ್ಲಿ ಹೊಡೆದು ಒಂದೇ ಏಟಿಗೆ ಅತ್ತೆಯ ಕೈ ಮುರಿದಿದ್ದಾನಂತೆ. ಪದೇ ಪದೇ ಮನೆಯ ಹತ್ತಿರ ಬಂದು ಕಿರುಕುಳ ಕೊಡ್ತಿರುವ ಈತನ ವಿರುದ್ಧ ಹಿಂದೆಯೂ ದೂರು ದಾಖಲಿಸಿದ್ದು, ಪೊಲೀಸರು ಸೂಕ್ತ ಕ್ರಮ ವಹಿಸಿಲ್ಲ ಅಂತಾ ಆರೋಪ ಮಾಡ್ತಿದ್ದಾರೆ. ಒಟ್ನಲ್ಲಿ ಮದುವೆಯಾದ ಎಂಟು ತಿಂಗಳಲ್ಲಿ ಸಂಸಾರದಲ್ಲಿ ಬಿರುಕು ಮೂಡಿದ್ದು ಪತ್ನಿ ತವರು ಮನೆಗೆ ಬಂದರು, ಅಲ್ಲಿಗೂ ಬಂದ ಪತಿ ಹಣ ಕೊಡುವಂತೆ ಪೀಡಿಸುತ್ತಿದ್ದಾನೆ. ಪತಿಯ ದರ್ಪದ ಬಗ್ಗೆ ಪತ್ನಿಯೆ ದೂರು ಕೊಟ್ರು ಯಾವುದೇ ಪ್ರಯೋಜನವಾಗಿಲ್ಲ. ರಾತ್ರಿ ಪೆಟ್ರೋಲ್ ತಂದು ಎರಡು ಬೈಕ್ ಬೇರೆ ಸುಟ್ಟು ಹಾಕಿದ್ದಾನೆ. ನಮ್ಮ ಪತಿಯ ಕಿರುಕುಳ ತಪ್ಪಿಸಿ ಅಂತಾ ಮನವಿ ಮಾಡಿಕೊಂಡಿದ್ದಾರೆ.

ವರದಿ: ಮಹದೇವಪ್ರಸಾದ್ ಹಂಗಳ

# ಯೋಗದಿಂದ ಆರೋಗ್ಯ...

ಸಾಗರ : ಯೋಗದಿಂದ ಆರೋಗ್ಯ ರಕ್ಷಣೆ ಸಾಧ್ಯ. ಭಾರತದ ಯೋಗವನ್ನು ವಿಶ್ವವೇ ಒಪ್ಪಿಕೊಂಡಿದ್ದು, ಯೋಗದ ಮೂಲಕ ಆರೋಗ್ಯಪೂರ್ಣ ಬದುಕು ಕಟ್ಟಿಕೊಳ್ಳಲು ಸಾಧ್ಯ ಅದ್ದರಿಂದಲೆ ಯೋಗ ದಿನವನ್ನು ಇಡೀ ವಿಶ್ವಾದ್ಯಂತ ಆಚರಿಲಾಗುತ್ತದೆ ಎಂದು ನಗರಸಭೆ ಸದಸ್ಯ ಆರ್.ಶ್ರೀನಿವಾಸ್ ತಿಳಿಸಿದರು. ಇಲ್ಲಿನ ಅಣಲೆಕೊಪ್ಪದಲ್ಲಿ ಬುಧವಾರ ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆ ಹಾಗೂ ಆಯುಷ್ ಇಲಾಖೆ ವತಿಯಿಂದ ಅಂತರಾಷ್ಟ್ರೀಯ ಯೋಗ ದಿನದ ಪೂರ್ವಭಾವಿಯಾಗಿ ಆಯೋಜಿಸಿದ್ದ ಯೋಗೋತ್ಸವ




ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು. ಒತ್ತಡದ ನಡುವೆ ಬದುಕುತ್ತಿರುವ ನಮಗೆಲ್ಲಾ ಯೋಗ ಮಾನಸಿಕ ಸ್ಥೈರ್ಯ ಮತ್ತು ಪರಿಸ್ಥಿತಿಯನ್ನು ಎದುರಿಸುವ ಶಕ್ತಿ ನೀಡುತ್ತದೆ. ಪ್ರಸ್ತುತ ಇಡೀ ವಿಶ್ವವೇ ಭಾರತದ ಯೋಗಶಕ್ತಿಗೆ ತಲೆಬಾಗಿದೆ. ಯೋಗದಿಂದ ನಿರೋಗಿಗಳಾಗಿ ಬದುಕಲು ಸಾಧ್ಯವಿದೆ. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಮಹಿಳೆಯರಿಗೆ ಯೋಗ ಕುರಿತು ತರಬೇತಿ ನೀಡುತ್ತಿರುವುದು ಸ್ವಾಗತಾರ್ಹ ಸಂಗತಿ ಎಂದು ಹೇಳಿದರು. ಪುರಪ್ಪೆಮನೆ ಸರ್ಕಾರಿ ಆಯುರ್ವೇದ ಚಿಕಿತ್ಸಾಲಯದ ವೈದ್ಯಾಧಿಕಾರಿ ಡಾ. ಪತಂಜಲಿ ಮಾತನಾಡಿ, ಪ್ರತಿಯೊಬ್ಬರೂ ಯೋಗವನ್ನು ಕಲಿಯುವ ಅಗತ್ಯವಿದೆ. ನಾವು ಉಪಯೋಗಿಸುತ್ತಿರುವ ಆಹಾರ, ಉಸಿರಾಡುತ್ತಿರುವ ಗಾಳಿ, ಕುಡಿಯುವ ನೀರು ಎಲ್ಲವೂ ಕಲುಷಿತಗೊಳ್ಳುತ್ತಿರುವ ಸಂಕೀರ್ಣ ಕಾಲಘಟ್ಟ ಇದಾಗಿದೆ. ಇಂತಹ ಹೊತ್ತಿನಲ್ಲಿ ನಾವು ಯೋಗವನ್ನು ಕಲಿಯುವ ಮೂಲಕ ಸಾಧ್ಯವಾದಷ್ಟು ಆರೋಗ್ಯ ರಕ್ಷಣೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

# ಟಾಟಾ ಮ್ಯಾಜಿಕ್ ದ್ವಿ–ಇಂಧನದೊಂದಿಗೆ

## ಬೆಂಗಳೂರಿನ ಕೊನೆಯ ಮೈಲಿ ಸಂಪರ್ಕವನ್ನು ಬಲಪಡಿಸುವುದು

ಬೆಂಗಳೂರು: ಭಾರತದ ಹೆಮ್ಮೆಯ ಟಾಟಾ ಮೋಟರ್ಸ್ ನ ಟಾಟಾ ಮ್ಯಾಜಿಕ್ ಇದೀಗ ನಗರ ಪ್ರದೇಶಗಳ ರಸ್ತೆಗಳಿಂದ ಗ್ರಾಮೀಣ ಭಾಗದ ಕಟ್ಟಕಡೆಯ ಸ್ಥಳಗಳವರೆಗೆ ಲಕ್ಷಾಂತರ ಜನರನ್ನು ಹೊತ್ತೊಯ್ದು ಹೊಸ ಮೈಲುಗಲ್ಲು ಸ್ಥಾಪಿಸಿದೆ.

ಇದೀಗ, ಇತ್ತೀಚೆಗೆ ಬಿಡುಗಡೆ ಮಾಡಿರುವ ಟಾಟಾ ಮ್ಯಾಜಿಕ್ ಬೈ–ಫ್ಯುಯೆಲ್ ಈ ಪ್ರಯಾಣವನ್ನು ಮತ್ತಷ್ಟು ಗಟ್ಟಿಗೊಳಿಸಲಿದೆ ಮತ್ತು ಉನ್ನತ ಮಟ್ಟಕ್ಕೆ ಕೊಂಡೊಯ್ಯಲಿದೆ.



60 ಲೀಟರ್ ಸಾಮರ್ಥ್ಯದ ಸಿಎನ್ ಜಿ ಟ್ಯಾಂಕ್ ಮತ್ತು 5 ಲೀಟರ್ ಸಾಮರ್ಥ್ಯದ ಪೆಟ್ರೋಲ್ ಟ್ಯಾಂಕ್ ನೊಂದಿಗೆ ಬರುವ ಈ ವಾಹನವು ಒಂದು ಬಾರಿ ಇಂಧನವನ್ನು ಭರ್ತಿ ಮಾಡಿದರೆ 300 ಕಿಲೋಮೀಟರ್ ವರೆಗೆ ಕ್ರಮಿಸಲಿದೆ. ಈ ಮೂಲಕ ವಾಹನವನ್ನು ದೂರದ ಮಾರ್ಗಗಳು ಮತ್ತು ದುರ್ಗಮ ಪ್ರದೇಶಗಳಲ್ಲಿ ಪ್ರಯಾಣಿಸುವ ರೀತಿಯಲ್ಲಿ ಸಿದ್ಧಪಡಿಸಲಾಗಿದೆ. ಈ ಆವಿಷ್ಕಾರಕ ಶ್ರೇಣಿಯ ವಾಹನವನ್ನು ತಡೆರಹಿತವಾಗಿ ಸಿಎನ್ ಜಿ ಮತ್ತು ಪೆಟ್ರೋಲ್ ಬಳಕೆಯನ್ನು ಸುಲಭವಾಗಿ ಬದಲಾಯಿಸಿಕೊಳ್ಳಬಹುದಾಗಿದೆ. ಇದರಿಂದಾಗಿ ಸಮಯ ಉಳಿತಾಯ ಹಾಗೂ ಇಂಧನ ಬಳಕೆ ಪ್ರಮಾಣವನ್ನು ಕಡಿಮೆ ಮಾಡಲು ನೆರವಾಗಲಿದೆ.

ಈ ಟಾಟಾ ಮ್ಯಾಜಿಕ್ ಬೈ–ಫ್ಯುಯೆಲ್ ಪ್ರಯಾಣಿಕರು ಮತ್ತು ಚಾಲಕರ ಅಗತ್ಯತೆಗಳನ್ನು ಪೂರೈಸಲಿದೆ. ತನ್ನ ಶ್ರೇಣಿಯಲ್ಲಿ ಅತ್ಯಧಿಕ ಆಸನ ಸಾಮರ್ಥ್ಯವನ್ನು ಅಂದರೆ, 9+ಚಾಲಕ ಸಾಮರ್ಥ್ಯವನ್ನು ಹೊಂದಿರುವ ಈ ವಾಹನವು ರೇಡಿಯಲ್ ಟೈರ್, ಗೇರ್ ಶಿಫ್ಟ್ ಅಡ್ವೈಸರ್ ಮತ್ತು ಉನ್ನತೀಕರಿಸಿದ ಚಾಲಕನ ವೈಶಿಷ್ಟ್ಯತೆಗಳನ್ನು ಒಳಗೊಂಡಿದೆ. ವಾಹನವು ಇಂಧನ ಬಳಕೆಯ ಮಟ್ಟವನ್ನು ಗರಿಷ್ಠಗೊಳಿಸುತ್ತದೆ. ಈ ಮೂಲಕ ಮಾಲೀಕರಿಗೆ ಇಂಧನ ಹೊರೆಯನ್ನು ಕಡಿಮೆ ಮಾಡುತ್ತದೆ.

ಎರಡು ವರ್ಷಗಳು ಅಥವಾ ಮೊದಲ 72,000 ಕಿಲೋಮೀಟರ್ ವರೆಗೆ ವಾರಂಟಿಯನ್ನು ಹೊಂದಿರುವ ಈ ಟಾಟಾ ಮ್ಯಾಜಿಕ್ ಬೈ–ಫ್ಯುಯೆಲ್ ವಿಶ್ವಾಸಾರ್ಹತೆ ಮತ್ತು ಬಾಳಿಕೆಯ ಭರವಸೆಗೆ ಪೂರಕವಾಗಿದೆ. ಇದರಿಂದಾಗಿ ಮಾಲೀಕರು ಮತ್ತು ವ್ಯಕ್ತಿಗತ ಆಪರೇಟರ್ ಗಳಿಗೆ ನೆಮ್ಮದಿಯನ್ನು ತಂದುಕೊಡುತ್ತದೆ.

# ತೈಲ ಬೆಲೆ ಏರಿಕೆಯ ಮೂಲಕ ರಾಜ್ಯದ ಜನತೆಗೆ ಸರಿಯಾಗಿ ಬರೆ ಎಳೆದಿದೆ

ತಿ.ನರಸೀಪುರ:–ಸಿಎಂ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ತೈಲ ಬೆಲೆ ಏರಿಸಿವು ಮೂಲಕ ರಾಜ್ಯದ ಜನತೆಗೆ ಸರಿಯಾಗಿ ಬರೆ ಎಳೆದಿದೆ ಎಂದು ಬಿಜೆಪಿ ಹಿರಿಯ ಮುಖಂಡ ತೋಟದಪ್ಪ ಬಸವರಾಜು ಆರೋಪಿಸಿದರು. ವರಣಾ ವಿಧಾನ ಸಭಾ ಕ್ಷೇತ್ರದ ಬಿಜೆಪಿ ಮಂಡಲದ ವತಿಯಿಂದ ಗರ್ಗೇಶ್ವರಿ ಬಿಂದಿಗೆ ಪ್ಯಾಕ್ಟರಿ ಬಳಿಯ ರಾಷ್ಟ್ರೀಯ ಹೆದ್ದಾರಿಯಲ್ಲಿ ನೆಡದ ರಸ್ತೆ ತಡೆ ಚಳುವಳಿಯಲ್ಲಿ ಭಾಗವಹಿಸಿ ಮಾತನಾಡಿದ ತೋಟದಪ್ಪ ಬಸವರಾಜು ಅಧಿಕಾರಕ್ಕಾಗಿ ರಾಜ್ಯದ ಜನತೆಗೆ ಉಚಿತ ಭಾಗ್ಯಗಳನ್ನು ಘೋಷಣೆ ಮಾಡಿ ಅಧಿಕ್ಕಾರಕ್ಕೆ ಬಂದ ನಂತರ ಬಿಟ್ಟಿ ಭಾಗ್ಯ ಮುಂದುವರೆಸಲು ಹೆಣಗಾಡುತ್ತಿರುವ ಸರ್ಕಾರ ಬೆಲೆ ಏರಿಕೆ ಮಾಡುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.



ಓಟ್ ಬ್ಯಾಂಕ್ ರಾಜಕಾರಣಕ್ಕಾಗಿ ಉಚಿತ ಭಾಗ್ಯಗಳನ್ನು ನೀಡಿ ರಾಜ್ಯ ಸರ್ಕಾರ ಆರ್ಥಿಕವಾಗಿ ದಿವಾಳಿ ಯಾಗಿದೆ ಅಭಿವೃದ್ಧಿ ಕಾರ್ಯಗಳು ರಾಜ್ಯದಲ್ಲಿ ಹಿನ್ನಡೆಯಾಗಿದೆ ಮುಖ್ಯ ಮಂತ್ರಿ ಸಿದ್ದರಾಮಯ್ಯ ರವರು ಬಿಟ್ಟಿ ಭಾಗ್ಯ ತುಂಬಿಸಲು ಹಗಲು ದರೋಡೆ ಮಾಡುತ್ತಿದ್ದಾರೆ ರಾಜ್ಯ ಭಾರ ಮಾಡುತ್ತಿರುವವರಿಗೆ ಅಮ್ಮು ಅಹಂ ತುಳುಕುತ್ತಿದೆ ಮುಂದಿನ ದಿನಗಳಲ್ಲಿ ಜನರು ಇವರಿಗೆ ತಕ್ಕ ಪಾಠ ಕಲಿಸಲಿದ್ದಾರೆ. ಮುಂದುವರಿದು ಮಾತನಾಡಿದ ತೋಟದಪ್ಪ ಬಸವರಾಜು

ಹಿಂದೆ ಬಿಜೆಪಿ ಆಡಳಿತದಲ್ಲಿದ್ದಾಗ ಪಿ.ಎಂ.ಕಿಸಾನ್ ಯೋಜನೆಗೆ ಕೇಂದ್ರ ಸರ್ಕಾರ ನೀಡುತ್ತಿದ್ದ 6ಸಾವಿರ ಹಣದ ಜೊತೆಗೆ ರಾಜ್ಯ ಸರ್ಕಾರ ಕೂಡ 4 ಸಾವಿರ ನೀಡುತಿತ್ತು ಈಗ ಕಾಂಗ್ರೆಸ್ ಸರ್ಕಾರ ರೈತರಿಗೆ ನೀಡುತ್ತಿದ್ದ 4 ಸಾವಿರವನ್ನು ನಿಲ್ಲಿಸಿ ರೈತ ವಿರೋಧಿ ನೀತಿ ಅನುಸರಿಸುತ್ತಿದೆ ರಾಜ್ಯ ಸರ್ಕಾರ ಜನ ನೀತಿ ವಿರೋದಿಗೆ ತಿಲಾಂಜಲಿ ಹಾಡದಿದ್ದರೆ ಮುಂದೆ ಉಗ್ರ ಹೋರಾಟವನ್ನು ಬಿಜೆಪಿ ಪಕ್ಷ ಮಾಡಲಿದೆ ಎಂದು ಎಚ್ಚರಿಸಿದರು.

ಜಿಲ್ಲಾ ಗ್ರಾಮಾಂತರ ಅಧ್ಯಕ್ಷ ಎಲ್. ಆರ್.ಮಹದೇವಸ್ವಾಮಿ ಮಾತನಾಡಿದರು.ವರುಣ ಮಂಡಲ ಅಧ್ಯಕ್ಷ ಸತೀಶ್, ಉಸ್ತುವಾರಿ ಚಿಕ್ಕ ರಂಗನಾಯಕ,ಜಿಲ್ಲಾ ಕಾರ್ಯದರ್ಶಿ ವಾಸುದೇವ್, ಎಸ್. ಟಿ ಮೋರ್ಚ ಜಿಲ್ಲಾಧ್ಯಕ್ಷ ಮುದ್ದುಕೃಷ್ಣ, ರೈತ ಮೋರ್ಚಾ ಅಧ್ಯಕ್ಷ ಕೀಳನಪುರ ಮಾದಪ್ಪ, ಡೈರಿ ಅಧ್ಯಕ್ಷ ಡಿಎಲ್ ಮಹದೇವಪ್ಪ, ಬಾಬು ಜಗಜೀವನ್ ರಾಮ್ ಸಂಘದ ಅಧ್ಯಕ್ಷ ಪುಟ್ಟಯ್ಯ, ಬಿ.ಎಲ್ ಮಹದೇವ್, ವೆಂಕಟರಮಣ ಶೆಟ್ಟಿ, ಲಕ್ಕಿ, ಕೀರ್ತಿ ಸೇರಿದಂತೆ ಹಾಜರಿದ್ದರು.

# ನಾವದಗಿ ಗ್ರಾಮಕ್ಕೆ ಲೋಕಾಯುಕ್ತ ಅಧಿಕಾರಿಗಳ ಭೇಟಿ

ಮುಂಜಾನೆ ವಾರ್ತೆ ಸುದ್ದಿ

ತಾಳಿಕೋಟಿ: ತಾಲೂಕಿನ ನಾವದಗಿ ಹಾಗೂ ಕೆಲವು ಗ್ರಾಮಗಳಲ್ಲಿ ಕಳೆದ ಒಂದು ವಾರದ ಹಿಂದೆ ಕಲುಷಿತ ನೀರು ಸೇವನೆಯಿಂದಾಗಿ ಉಂಟಾದ ಆರೋಗ್ಯ ಸಮಸ್ಯೆ ಹಿನ್ನೆಲೆಯಲ್ಲಿ ಲೋಕಾಯುಕ್ತ ಅಧಿಕಾರಿಗಳು ನಾವದಗಿ ಗ್ರಾಮಕ್ಕೆ ಗುರುವಾರ ಬೇಟಿ ನೀಡಿದರು. ಈ ಸಂದರ್ಭದಲ್ಲಿ ಲೋಕಾಯುಕ್ತ ಡಿ ವೈ ಎಸ್ ಪಿ ರೆಡ್ಡಿಯವರು ನಾವದಗಿ ಗ್ರಾಮದಲ್ಲಿರುವ ಕುಡಿಯುವ ನೀರಿನ ಮೂಲಗಳಾದ ತೆರೆದ ಬಾವಿ ಮತ್ತು ಬೋರ್ವೆಲ್ ನೀರಿನ ಸ್ಥಳಗಳನ್ನು ಪರಿಶೀಲಿಸಿದರು ನೀರಿನ ಶುದ್ಧತೆ ಕುರಿತು



ಪಿಡಿಒ ಅನಿಲ್ ಕುಮಾರ್ ಕಿರಣಗಿ ಇವರಿಂದ ವಿವರವಾದ ಮಾಹಿತಿ ಪಡೆದುಕೊಂಡರು. ಶುದ್ಧ ನೀರು ಪೂರೈಸಲು ಗ್ರಾಮ ಪಂಚಾಯತಿಯಿಂದ ತೆಗೆದುಕೊಳ್ಳುವ ಕ್ರಮಗಳ ಕುರಿತು ವಿವರ ಕೇಳಿ ತಿಳಿದುಕೊಂಡರು. ಗ್ರಾಮದಲ್ಲಿರುವ ಆರ್ ಓ ಪ್ಲಾಂಟ್ ಸ್ಥಗಿತಗೊಂಡಿತು ಅದನ್ನು ಆದಷ್ಟು ಬೇಗ ಪ್ರಾರಂಭಿಸಲು ಸೂಚನೆ ನೀಡಿದರು. ನಂತರ ಅವರು ಗ್ರಾಮದಲ್ಲಿ ತಾತ್ಕಾಲಿಕವಾಗಿ ಆರಂಭಿಸಿದ ಓಪಿಡಿಗೆ ಭೇಟಿ ನೀಡಿ ತಾಲೂಕ ವೈದ್ಯಾಧಿಕಾರಿ ಸತೀಶ ತಿವಾರಿ ಅವರಿಂದ ಕಲುಷಿತ ನೀರು ಸೇವಿಸಿ ಅಸ್ಥವ್ಯಸ್ತಗೊಂಡ ರೋಗಿಗಳ ಮಾಹಿತಿ ಹಾಗೂ ಮುಂಜಾಗ್ರತ ಕ್ರಮಗಳ ಕುರಿತು ವಿವರುಗಳನ್ನು ಪಡೆದುಕೊಂಡರು. ಸ್ಥಳದಲ್ಲಿದ್ದ ಕೊಡಗನೂರು ಪಿಡಿಒ ಅವರಿಗೆ ಯಾವ ಕಾರಣಕ್ಕೂ ಅಜಾಗ್ರತೆ ಆಗದಂತೆ ನೋಡಿಕೊಳ್ಳಿ ಎಂದು ಸೂಚನೆ ನೀಡಿದರು. ಈ ಸಮಯದಲ್ಲಿ ಲೋಕಾಯುಕ್ತ ಸಿಪಿಐ.ತಾಪಂ ಇಒ ಬಿ.ಆರ್.ಬಿರಾದಾರ. ತಾಲೂಕಾ ಆರೋಗ್ಯಾಧಿಕಾರಿ ಸತೀಶ ತಿವಾರಿ. ಕೊಡಗಾನೂರ ಗ್ರಾಪಂ ಕಾರ್ಯದರ್ಶಿ ಚೌಧರಿ. ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಮತ್ತಿತರರು ಇದ್ದರು.

ವರದಿ: ಸುನೀಲ್ ಎಲ್ ತಳವಾರ
ಮುಂಜಾನೆ ವಾರ್ತೆ ತಾಳಿಕೋಟಿ

# ಬಡವರನ್ನು ಸುಲಿಗೆ ಮಾಡುತ್ತಿರುವ ರಾಜ್ಯ ಸರ್ಕಾರದ ವಿರುದ್ಧ ರಸ್ತೆ ತಡೆದು ಪ್ರತಿಭಟನೆ

ವಾಲ್ಮೀಕಿ ಅಭಿವೃದ್ಧಿ ನಿಗಮದ ಅವ್ಯವಹಾರ ಪ್ರಕರಣಕ್ಕೆ ಸಂಬಂಧಪಟ್ಟಂತೆ ಮುಖ್ಯಮಂತ್ರಿಗಳ ರಾಜೆನಾಮೆಗೆ ಒತ್ತಾಯಿಸಿ ಜೂನ್ 25ರಂದು ಜಿಲ್ಲಾಧಿಕಾರಿಗಳ ಕಚೇರಿ ಮುತ್ತಿಗೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಟಿ.ಡಿ.ಮೇಘರಾಜ್ ತಿಳಿಸಿದರು.

ಇಲ್ಲಿನ ಬಿ.ಎಚ್.ರಸ್ತೆಯಲ್ಲಿ ಗುರುವಾರ ರಾಜ್ಯ ಸರ್ಕಾರದ ಇಂಧನ ದರ ಏರಿಕೆ ಖಂಡಿಸಿ ಹಮ್ಮಿಕೊಳ್ಳಲಾಗಿದ್ದ ರಸ್ತೆತಡೆ ಪ್ರತಿಭಟನೆಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಅಭಿವೃದ್ಧಿಗೆ ಸೇರಬೇಕಾದ 187 ಕೋಟಿ ರೂ. ಹಣ ಅವ್ಯವಹಾರಕ್ಕೆ ಸಂಬಂಧಪಟ್ಟಂತೆ ಸಚಿವ ನಾಗೇಂದ್ರ ರಾಜೆನಾಮೆ ನೀಡಿದ್ದಾರೆ.

ಆದರೆ ಆಡಳಿತ ವೈಫಲ್ಯದ ನೇರಹೊಣೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹೊತ್ತು ತಮ್ಮ ಸ್ಥಾನಕ್ಕೆ ತಕ್ಷಣ ರಾಜೆನಾಮೆ ನೀಡಬೇಕು ಎಂದು ಒತ್ತಾಯಿಸಿ ಬಿಜೆಪಿ ಜಿಲ್ಲಾ ಘಟಕ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದಿಂದ ಜಿಲ್ಲಾಧಿಕಾರಿಗಳ ಕಚೇರಿ ಮುತ್ತಿಗೆ ಹಾಕಲಾಗುತ್ತದೆ ಎಂದು ಹೇಳಿದರು.



ರಾಜ್ಯದಲ್ಲಿರುವುದು ಪಿಕ್‌ಪಾಕೇಟ್ ಸರ್ಕಾರ. ಭಾಗ್ಯಗಳ ಹೆಸರಿನಲ್ಲಿ ಅಧಿಕಾರಕ್ಕೆ ಬಂದು ಈಗ ಭಾಗ್ಯಗಳಿಗೆ ಹಣ ಸಂಗ್ರಹ ಮಾಡುತ್ತೇವೆ ಎಂದು ಇಂಧನ ಬೆಲೆ ಹೆಚ್ಚು ಮಾಡಿದ್ದಾರೆ.

ಜೊತೆಗೆ ಬಸ್ ದರ ಏರಿಸುವ ಸೂಚನೆ ನೀಡುತ್ತಿದ್ದಾರೆ. ದಿನ ಬಳಕೆ ವಸ್ತುಗಳ ಬೆಲೆ ಗಗನಕ್ಕೆ ಏರಿದೆ. ರಾಜ್ಯದ ಶೇ. 30ರಷ್ಟು ಜನರಿಗೆ ಮಾತ್ರ ಗ್ಯಾರಂಟಿ ತಲುಪುತ್ತಿದೆ. ಆದರೆ ಶೇ. 100ರಷ್ಟು ಜನರು ಹೆಚ್ಚಿನ ತೆರಿಗೆ ಹೊರೆ ಅನುಭವಿಸಬೇಕಾಗಿದೆ. ಭಾಗ್ಯಗಳನ್ನು ಪಡೆಯದ ಎಲ್ಲರನ್ನೂ ಜಾಗೃತಿಗೊಳಿಸಿ ರಾಜ್ಯ ಸರ್ಕಾರದ ವಿರುದ್ಧ ಬೃಹತ್ ಜನಾಂದೋಲನ ರೂಪಿಸಲಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ತಾಲ್ಲೂಕು ಪಂಚಾಯ್ತಿ ಮಾಜಿ ಅಧ್ಯಕ್ಷ ಮಲ್ಲಿಕಾರ್ಜುನ ಹಕ್ರೆ ಮಾತನಾಡಿ, ಗ್ಯಾರಂಟಿ ಮೂಲಕ ಲೋಕಸಭಾ ಚುನಾವಣೆಯಲ್ಲಿ ಹೆಚ್ಚು ಸ್ಥಾನ ಪಡೆಯಬಹುದು ಎಂದು ಕೊಂಡಿದ್ದ ಕಾಂಗ್ರೆಸ್‌ಗೆ ಮುಖ ಭಂಗವಾಗಿದ್ದು ಅದಕ್ಕಾಗಿ ಇಂಧನ ಬೆಲೆ ಹೆಚ್ಚಳದ ಮೂಲಕ ರಾಜ್ಯದ ಜನರ ಮೇಲೆ ಸೇಡು ತೀರಿಸಿಕೊಳ್ಳುತ್ತಿದೆ.

ಶಿವಮೊಗ್ಗ ಜಿಲ್ಲೆಯಲ್ಲಿ ಆಡಳಿತ ಸಂಪೂರ್ಣ ವಿಫಲವಾಗಿದೆ. ಸಾಗರದಲ್ಲಿ ನಯಾಪೈಸೆ ಅಭಿವೃದ್ಧಿ ಕೆಲಸವಾಗಿಲ್ಲ. ಶಾಸಕರು ತಾಲ್ಲೂಕಿನ ಜನರಿಗೆ ನೀಡಿದ ಕೊಡುಗೆ ಎಂದರೆ ಡೇಂಗ್ಯೂ ಜ್ವರ.

ಸ್ವಚ್ಚತೆ ಕೊರತೆಯಿಂದ ತಾಲ್ಲೂಕಿನಲ್ಲಿ ಡೇಂಗ್ಯೂ ಪ್ರಕರಣ ಹೆಚ್ಚಿದ್ದು ಆಸ್ಪತ್ರೆಯಲ್ಲಿ ಬೆಡ್ ಹಾಕಲು ಸಹ ಜಾಗ ಇಲ್ಲದ ಸ್ಥಿತಿ ನಿರ್ಮಾಣವಾಗಿದೆ ಎಂದು ದೂರಿದರು.

ನಂತರ ಕೆಲ ನಿಮಿಷಗಳ ಕಾಲ ಬಿ ಹೆಚ್ ರಸ್ತೆಯಲ್ಲಿ ರಸ್ತೆ ತಡೆದು ಪ್ರತಿಭಟನೆ ಮಾಡಲಾಯಿತು.

ಮಾತನಾಡಿದರು. ಈ ಸಂದರ್ಭದಲ್ಲಿ ಬಿಜೆಪಿ ಪ್ರಮುಖರಾದ ದೇವೇಂದ್ರಪ್ಪ, ಗಣೇಶಪ್ರಸಾದ್, ಮಧುರಾ ಶಿವಾನಂದ್, ಕೆ.ಎಸ್.ಪ್ರಶಾಂತ್,

ಶ್ರೀನಿವಾಸ್ ಮೇಸ್ತ್ರಿ ವಿ.ಮಹೇಶ್, ಸಂತೋಷ್ ಶೇಟ್, ಭರ್ಮಪ್ಪ ಅಂದಾಸುರ, ರಮೇಶ್ ಎಚ್.ಎಸ್., ಪರಶುರಾಮ್, ಚಂದ್ರಕಾಂತ್, ಹು.ಭಾ.ಅಶೋಕ್, ಕೃಷ್ಣ ಶೇಟ್, ಪ್ರೇಮ ಸಿಂಗ್, ಭಾವನಾ ಸಂತೋಷ್ ಶೇಟ್. ಕೃಷ್ಣಶೇಟ್. ಮೈತ್ರಿ ಪಾಟೀಲ್, ಸುಧಾ ಉದಯ್, ಇನ್ನಿತರರು ಹಾಜರಿದ್ದರು

# ಗ್ಯಾರಂಟಿಗಳಿಂದಾಗಿ ಖಜಾನೆ ಖಾಲಿಯಾಗಿದ್ದು, ಇದನ್ನು ಸರಿತೂಗಿಸಲು ಪೆಟ್ರೋಲ್, ಡೀಸೆಲ್ ದರ ಏರಿಕೆ ಮಾಡಿದ್ದಾರೆ: ಕೆ.ಎಸ್.ಮಂಜುನಾಥ್‌ಗೌಡ

ಮಾಲೂರು: ಲೋಕಸಭೆಯಲ್ಲಿ ನಿರೀಕ್ಷೆಯ ಗೆಲುವು ಕಾಣದೆ ಮತದಾರರ ಮೇಲೆ ದ್ವೇಷ ಮತ್ತು ವಿಧಾನ ಸಭಾ ಚುನಾವಣೆಯಲ್ಲಿ ಭರವಸೆ ನೀಡಿದ್ದ ಅವೈಜ್ಞಾನಿಕ ಗ್ಯಾರಂಟಿಗಳಿಂದಾಗಿ ಖಜಾನೆ ಖಾಲಿಯಾಗಿದ್ದು, ಇದನ್ನು ಸರಿತೂಗಿಸಲು ಪೆಟ್ರೋಲ್, ಡೀಸೆಲ್ ದರವನ್ನು ಏರಿಕೆ ಮಾಡಲಾಗಿದೆ, ಇದರಿಂದಾಗಿ ದಿನ ಬಳಕೆಯ ಎಲ್ಲಾ ಅಗತ್ಯ ವಸ್ತುಗಳ ಬೆಲೆ ದುಬಾರಿಯಾಗಲಿದೆ ಎಂದು ಮಾಜಿ ಶಾಸಕ ಕೆ. ಎಸ್.ಮಂಜುನಾಥ್ ಗೌಡ ರಾಜ್ಯ ಸರ್ಕಾರದ ವಿರುದ್ಧ ಕಿಡಿಕಾರಿದರು.

ಪಟ್ಟಣದ ಮಾರಿಕಾಂಬಾ ವೃತ್ತದಲ್ಲಿ ಬಿ.ಜೆ.ಪಿ.ತಾಲ್ಲೂಕು ಅಧ್ಯಕ್ಷ ಟಿ.ಬಿ.ಕೃಷ್ಣಪ್ಪ ನೇತೃತ್ವದಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿ ರಾಜ್ಯ ಸರ್ಕಾರ ಏರಿಸಿರುವ ಪೆಟ್ರೋಲ್ ಡೀಸೆಲ್ ದರವನ್ನು ಕೂಡಲೇ ಇಳಿಸಬೇಕೆಂದು ಆಗ್ರಹಿಸಿ ತಹಶೀಲ್ದಾರ್ ಕೆ.ರಮೇಶ್ ಮುಖಾಂತರ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಬಿಜೆಪಿ ಆಡಳಿತದಲ್ಲಿ ಪೆಟ್ರೋಲ್ ಬೆಲೆ ಏರಿಕೆ ಆದಾಗ ಬೀದಿಗೆ ಇಳಿದಿದ್ದ ಸಿದ್ದರಾಮಯ್ಯಅವರು ತಮ್ಮ ನೇತೃತ್ವದ ಕಾಂಗ್ರೆಸ್ ಸರಕಾರಕ್ಕೆ ಬಂದ 14 ತಿಂಗಳಲ್ಲೇ ಬೆಲೆ ಏರಿಸಿದ್ದಲ್ಲದೆ ಅದನ್ನು ಸಮರ್ಥಿಸಿಕೊಳ್ಳುತ್ತಿರುವುದು ನಾಚಿಕೆಗೇಡಿನ ಸಂಗತಿ. ಲೋಕಸಭೆ ಫಲಿತಾಂಶ ನೋಡಿಯಾದರೂ ಸರಕಾರಕ್ಕೆ ಈಗಲಾದರೂ ಬುದ್ಧಿಬರಬೇಕಿದೆ ನಾವು ಮಾಡಿದ್ದೇ ಸರಿ ಎಂದು ನಡೆದುಕೊಳ್ಳಬೇಡಿ. ಉಳಿದ 4 ವರ್ಷಗಳಲ್ಲಿ ಬಡವರ ಕೆಲಸ ಮಾಡಿ ರಾಜ್ಯದ ಅಭಿವೃದ್ಧಿ ಮಾಡಿ. ರಸ್ತೆಗಳ ನಿರ್ಮಾಣ ಮಾಡಿ, ಹಾಳಾದ ರಸ್ತೆಗಳನ್ನು ಯಾರಾದರೂ ನೋಡಿದ್ದೀರಾ? ಅವುಗಳನ್ನು ಸರಿಪಡಿಸಿ ಸುಗಮ ಸಂಚಾರಕ್ಕೆ ಅವಕಾಶ ಕಲ್ಪಿಸಿ ಎಂದರು.

ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರ ಲೋಕಸಭೆ ಚುನಾವಣೆಯಲ್ಲಿ ಎರಡಂಕಿಯೂ ತಲುಪದೆ ಹೀನಾಯವಾಗಿ ಸೋತ ಬಳಿಕ ಪ್ರತೀಕಾರವಾಗಿ ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಮಾರಾಟ ತೆರಿಗೆಯನ್ನು ಏರಿಕೆ ಮಾಡಿದ್ದಾರೆ. ಆ ಮೂಲಕ ತಮಗೆ ಮತಹಾಕದ ಜನಸಾಮಾನ್ಯರ ಮೇಲೆ ಬೆಲೆಯೇರಿಕೆಯ ಹೊರೆ ಹೊರಿಸಿ ತತ್ತರಿಸುವಂತೆ ಮಾಡಿದ್ದಾರೆ. ವಾರ್ಷಿಕ 50 ರಿಂದ 60 ಸಾವಿರ ಕೋಟಿ



ಗ್ಯಾರಂಟಿಗಳಿಗೆ ನೀಡಿ ಆರ್ಥಿಕ ಅಶಿಸ್ತಿಗೆ ಕಾರಣವಾಗಿ ರಾಜ್ಯವನ್ನು ದಿವಾಳಿಯತ್ತ ತಳ್ಳಿದೆ. ಇದು ಹೀಗೇ ಮುಂದುವರೆದರೆ ಜನತೆ ಸಂಕಷ್ಟ ಎದುರಿಸಬೇಕಾಗುತ್ತದೆ.

14 ತಿಂಗಳಲ್ಲಿ ಅಭಿವೃದ್ಧಿ ಕಾರ್ಯಗಳು ನಿಂತಲ್ಲೇ ನಿಂತಿವೆ. ಬಡವರಿಗೆ ಅನುಕೂಲ ಮಾಡುವುದಾಗಿ ಹೇಳಿದ್ದ ಸರಕಾರ ಅವರ ಹೊಟ್ಟೆ ಮೇಲೆ ಬರೆ ಎಳೆದಿದೆ, ಇನ್ನಾದರೂ ರಾಜ್ಯ ಸರ್ಕಾರ ಎಚ್ಚೆತ್ತುಕೊಂಡು ಇಂಧನ ದರ ಇಳಿಕೆ ಮಾಡಬೇಕು ಇಲ್ಲವಾದಲ್ಲಿ ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳ ವತಿಯಿಂದ ಉಗ್ರ ಹೋರಾಟ ಎದುರಿಸಬೇಕಾಗುತ್ತದೆ ಎಂದರು. ಈ ಸಂದರ್ಭದಲ್ಲಿ ಬಿಜೆಪಿ ತಾಲ್ಲೂಕು ಅಧ್ಯಕ್ಷ ಟಿ.ಬಿ.ಕೃಷ್ಣಪ್ಪ, ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಬಿ.ಕೆ.ನಾರಾಯಣಸ್ವಾಮಿ, ಜಿ.ಪಂ.ಮಾಜಿ ಸದಸ್ಯ ಜಿ.ಇ.ರಾಮೇಗೌಡ, ಪುರಸಭಾ ಸದಸ್ಯರಾದ ಎಂ.ವಿ.ವೇಮನ, ವೆಂಕಟೇಶ್, ಅನಿತನಾಗರಾಜ್, ಮುಖಂಡರಾದ ನಂಜುಂಡಪ್ಪ, ರಾಘವೇಂದ್ರ, ಅಪ್ಪಿರಾಜು, ರಾಮಮೂರ್ತಿ, ಒಜರೋಹಳ್ಳಿ ಮುನಿಯಪ್ಪ, ಜಿಲ್ಲಾ ಉಪಾಧ್ಯಕ್ಷರಾದ ಪುರನಾರಾಯಣಸ್ವಾಮಿ, ಚಿನ್ನಸ್ವಾಮಿ ಗೌಡ, ಬೆಳ್ಳಾವಿ ಸೋಮಣ್ಣ, ಮಡಿವಾಳ ಚಂದ್ರಶೇಖರ್, ದ್ಯಾಪಸಂದ್ರ ವಿಜಿ, ಅಮುದಾವೇಣು, ಪದ್ಮಾವತಿ, ದೊಡ್ಡಿರಾಜಪ್ಪ, ರಾಮಸ್ವಾಮಿ ರೆಡ್ಡಿ, ಅಜ್ಗರ್, ಮಹೇಶ್, ಆನಂದ್, ನಂದೀಶ್,ಕೆ.ಎನ್.ಜಗದೀಶ್, ಸಂಪಂಗೆರೆ ಬಾಲಕೃಷ್ಣ, ಬಾಬು, ಗಂಗಪ್ಪ, ಸಿ.ಎನ್.ನವೀನ್, ಲವ,ಕುಶ ಸೇರಿದಂತೆ ಹಲವಾರು ಬಿಜೆಪಿ ಹಾಗೂ ಜೆಡಿಎಸ್ ಕಾರ್ಯಕರ್ತರು ಭಾಗವಹಿಸಿದ್ದರು.

ವರದಿ: ಗೋಪಾಲಕೃಷ್ಣ, ಕೋಲಾರ.

# ರಾಜ್ಯ ಸರ್ಕಾರ ಪೆಟ್ರೋಲ್ ಡೀಸಲ್ ಹಾಗೂ ಅಗತ್ಯ ವಸ್ತುಗಳ ಬೆಲೆ ಏರಿಕೆ ಖಂಡಿಸಿ ಹೊಸನಗರದಲ್ಲಿ ರಸ್ತೆ ತೆಡೆದು ಪ್ರತಿಭಟನೆ....



ಹೊಸನಗರ : ರಾಜ್ಯ ಸರಕಾರದ ಪೆಟ್ರೋಲ್ ಡೀಸೆಲ್ ಬೆಲೆ ಏರಿಕೆ ಖಂಡಿಸಿ ಬಿಜೆಪಿ ನಾಯಕರಿಂದ ರಸ್ತೆ ತೆಡೆದು ಪ್ರತಿಭಟನೆ.ಪೆಟ್ರೋಲ್ ಡೀಸೆಲ್ ಬೆಲೆ ಶೀಘ್ರವಾಗಿ ಕಡಿಮೆ ಮಾಡಬೇಕು ಇಲ್ಲದಿದ್ದರೆ ಉಗ್ರ ಹೋರಾಟ ಬಿಜೆಪಿ ಮುಖಂಡರಿಂದ ರಾಜ್ಯ ಸರ್ಕಾರಕ್ಕೆ ಕಡಕ್ ಎಚ್ಚರಿಕೆ..ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯಗಳು ಕುಂಟಿತಗೊಂಡಿದೆ..ಗ್ಯಾರಂಟಿ ಹೆಸರಿನಲ್ಲಿ ಸರ್ಕಾರ ಜನರ ಹಣವನ್ನ ಲೂಟಿ ಮಾಡುತ್ತಿದ್ದೆ ಎಂದು ಹೊಸನಗರದ ತಾಲೋಕು ಕಚೇರಿ ಎದುರು ಬಿಜೆಪಿ ತಾಲೋಕ್ ಅಧ್ಯಕ್ಷರು ಹಾಗೂ ಯುವ ಮೋರ್ಚಾ ವತಿಯಿಂದ ಪ್ರೊಟೆಸ್ಟ್ .ಮಂಡಲದ ಅಧ್ಯಕ್ಷ. ಮತ್ತಿಮನೆ ಸುಬ್ರಹ್ಮಣ್ಯ ನೇತೃತ್ವದಲ್ಲಿ ಪ್ರತಿಭಟನೆ ನಡೆಯಿತು.ಇದೇ ಸಂದರ್ಭದಲ್ಲಿ ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ನಗರ ನಿತಿನ್ ಕಾರ್ಯದರ್ಶಿ ಕಾಲ್ ಸಸಿ ಸತೀಶ್. ಪಟ್ಟಣ ಪಂಚಾಯಿತಿ ಮಾಜಿ ಅಧ್ಯಕ್ಷ ಹಾಲಗದ್ದೆ ಉಮೇಶ್. ಎಂ ಎಲ್. ಸಿ. ಭೋಜೇಗೌಡ.ಮುಖಂಡರಾದ ಎನ್ ಆರ್ ದೇವಾನಂದ. ಸೇರಿದಂತೆ ಕಾರ್ಯಕರ್ತರು ಹಾಜರಿದ್ದರು..

ವರದಿ: ತನುಜ್ ಕುಮಾರ್ ಹೊಸನಗರ...

# ಗುಣಮಟ್ಟದ ಹಾಲಿನ ಬಗ್ಗೆ ಜಾಗೃತರಾಗಬೇಕು



ಕೆ.ಆರ್.ಪೇಟೆ: ನೂತನ ಹಾಲು ಶೀತಲೀಕರಣ ಘಟಕ ಉತ್ಪಾದಕರಿಗೆ ಸದ್ಬಳಕೆಯಾಗಲಿ, ಎಂದು ಮನ್ಮುಲ್ ನಿರ್ದೇಶಕ ಕೆ.ರವಿ (ಡಾಲು ರವಿ) ತಿಳಿಸಿದರು.

ತಾಲ್ಲೂಕಿನ ಬೂಕನಕೆರೆ ಹೋಬಳಿಯ ವಿಠಲಪುರ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ 2023-24ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆ ಹಾಗೂ ನೂತನ ಬಿ.ಎಂ.ಸಿ ಘಟಕವನ್ನು ಉದ್ಘಾಟಿಸಿ ಮಾತನಾಡಿದರು. ಗುಣಮಟ್ಟದ ಹಾಲು ಪೂರೈಸಿ ರೈತರು ಗುಣಮಟ್ಟದ ಹಾಲಿನ ಬಗ್ಗೆ ಜಾಗೃತರಾಗಬೇಕು. ಡೈರಿಗೆ ಗುಣಮಟ್ಟದ ಹಾಲನ್ನು ಪೂರೈಕೆ ಮಾಡಿದರೆ ಮಾತ್ರ ರೈತರಿಗೆ ಅಧಿಕ ಲಾಭ ದೊರೆಯಲಿದೆ. ಹಾಗಾಗಿ ಪ್ರತಿಯೊಬ್ಬ ರೈತರು ಗುಣಮಟ್ಟದ ಹಾಲನ್ನು ಪೂರೈಕೆ ಮಾಡಬೇಕು ಎಂದು ಸಲಹೆ ನೀಡಿದರು. ಹಾಲು ಉತ್ಪಾದಕರಲ್ಲಿ ಒಬ್ಬರು ಮಾಡುವ ತಪ್ಪಿನಿಂದ ಇಡಿ ಡೈರಿಯ ಹಾಲು ಉತ್ಪಾದಕರಿಗೆ ಪ್ರೋತ್ಸಾಹ ಧನ ನೀಡಲು ಸಾಧ್ಯವಾಗುವುದಿಲ್ಲ. ಇದನ್ನು ಮನಗೊಂಡು ಪ್ರತಿಯೊಬ್ಬರು ಗುಣಮಟ್ಟದ ಹಾಲನ್ನು ಪೂರೈಕೆ ಮಾಡಿದರೆ ಮಾತ್ರ ಎಲ್ಲಾ ರೈತರಿಗೂ ಪ್ರೋತ್ಸಾಹ ಧಾನ ಸಿಗುತ್ತದೆ.ನೂತನವಾಗಿ ನಿರ್ಮಿತವಾಗಿರುವ ಹಾಲು ಶೀತಲೀಕರಣ ಘಟಕ ಸಮರ್ಪಕವಾಗಿ ಸದ್ಬಳಕೆ ಆಗುವ ನಿಟ್ಟಿನಲ್ಲಿ ಸಹಕಾರಿಯಾಗಲಿ ಎಂದು ತಿಳಿಸಿದರು.

ಸಭೆಯಲ್ಲಿ ಮಾರ್ಗ ವಿಸ್ತರಣಾಧಿಕಾರಿ ಬಿ.ಸಿ ಮಧು ಕುಮಾರ್ ಈ ವರ್ಷದ ಆಯ್ಯವ್ಯಯ ಮತ್ತು ಮುಂದಿನ ವರ್ಷದ ಬಜೆಟ್‌ನ್ನು ಮಂಡಿಸಿದರು.

ಈ ಸಂದರ್ಭದಲ್ಲಿ ಮಂಡ್ಯ ಜಿಲ್ಲಾ ಹಾಲು ಒಕ್ಕೂಟದ ಕೆ.ಆರ್.ಪೇಟೆ ಉಪ ವ್ಯವಸ್ಥಾಪಕ ಪ್ರಸಾದ್,ಮಾರ್ಗ ವಿಸ್ತರಣಾಧಿಕಾರಿ ಬಿ.ಸಿ ಮಧು,ಎಂ.ಡಿ.ಸಿ.ಸಿ ಬ್ಯಾಂಕ್ ಮಾಜಿ ಅಧ್ಯಕ್ಷ ವಿ.ಡಿ ಹರೀಶ್,ಸಂಘದ ಅಧ್ಯಕ್ಷ ಶ್ರೀ ಅನಂತ್, ಉಪಾಧ್ಯಕ್ಷ ನಂದರಾಜು,ನಿರ್ದೇಶಕರಾದ ವಿ. ಕೆ ಗಣೇಶ್, ಶಿವಣ್ಣ, ನಾಗರಾಜೇಗೌಡ, ವೆಂಕಟೇಶ್, ವಿ. ಜೆ ಯೋಗೇಶ್, ಈಶ್ವರಯ್ಯ, ಸುವರ್ಣ ಎಂ. ಬಿ,ಮಮತ, ರಾಜು,ಸಂಘದ ಕಾರ್ಯದರ್ಶಿ ಮನು, ವಿ.ಎಸ್, ಅಭಿಜಿತ್, ಪುರುಷೋತ್ತಮ್,ಸೇರಿದಂತೆ ಉಪಸ್ಥಿತರಿದ್ದರು.

ಸುದ್ದಿಯೊಂದಿಗೆ ಮನು ಮಾಕವಳ್ಳಿ ಕೆ ಆರ್ ಪೇಟೆ

# ಪೆಟ್ರೋಲ್, ಡಿಸೇಲ್ ಬೆಲೆ ಏರಿಕೆ ಖಂಡಿಸಿ ಪ್ರತಿಭಟನೆ

ಮದ್ದೂರು: ರಾಜ್ಯ ಕಾಂಗ್ರೆಸ್ ಸರ್ಕಾರ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆ ಮಾಡಿರುವುದನ್ನು ಖಂಡಿಸಿ ಪಟ್ಟಣದಲ್ಲಿ ತಾಲ್ಲೂಕು ಬಿಜೆಪಿ ಘಟಕದ ನೇತೃತ್ವದಲ್ಲಿ ಬೆಂಗಳೂರು ಮೈಸೂರು ಹೆದ್ದಾರಿಯನ್ನು ತಡೆದು ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ರಾಜ್ಯದ ಕಾಂಗ್ರೆಸ್ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ದ್ವಿಚಕ್ರ ವಾಹನಗಳನ್ನು ರಸ್ತೆಯಲ್ಲಿ ಮಲಗಿಸುವ ಮೂಲಕ ಸರ್ಕಾರದ ನಡೆಯನ್ನು ಕಟುವಾಗಿ ಖಂಡಿಸಿದರು. ಬೆಂಗಳೂರು ಮೈಸೂರು ರಾಷ್ಟ್ರೀಯ ಹೆದ್ದಾರಿಯನ್ನು ಪಡೆದಿದ್ದರಿಂದ ಅರ್ಧ ಗಂಟೆಗೂ ಹೆಚ್ಚು ಕಾಲ ಸಂಚಾರ ಅಸ್ತವ್ಯಸ್ತವಾಯಿತು.

ಮನಮುಲ್ ನಿರ್ದೇಶಕ ಹಾಗೂ ಬಿಜೆಪಿ ಮುಖಂಡ ಡಾ. ಎಸ್.ಪಿ. ಸ್ವಾಮಿ ಅವರು ಮಾತನಾಡಿ, ರಾಜ್ಯದ ಜನ ಭೀಕರ ಬರಗಾಲಕ್ಕೆ ತುತ್ತಾಗಿ ವೇದನೆ ಪಡುವಂತಾಗಿದೆ. ಇಂತಹ ಪರಿಸ್ಥಿತಿಯಲ್ಲಿ ಬಿಟ್ಟಿ ಭಾಗ್ಯಗಳಿಗೆ ಹಣ ಹೊಂದಿಸುವ ಸಲುವಾಗಿ ಪೆಟ್ರೋಲ್ ಡೀಸೆಲ್ ಸೇರಿದಂತೆ ಅಗತ್ಯ ವಸ್ತುಗಳ ಬೆಲೆಗಳನ್ನು ಏರಿಕೆ ಮಾಡುವ ಮೂಲಕ ರಾಜ್ಯದ ಜನರಿಗೆ ಗಾಯದ ಮೇಲೆ ಬರೆ ಎಳೆಯುತ್ತಿರುವುದು ಸರಿಯಲ್ಲ. ತಕ್ಷಣ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಯನ್ನು ಕಡಿಮೆ ಮಾಡಬೇಕು ಎಂದು ರಾಜ್ಯದ ಕಾಂಗ್ರೆಸ್ ಸರ್ಕಾರವನ್ನು ಒತ್ತಾಯಿಸಿದರು.

ರೈತರಿಗೆ ರಾಜ್ಯ ಸರ್ಕಾರ ನೀಡುತ್ತಿದ್ದ ಕಿಸಾನ್ ಸಮ್ಮಾನ್ ಯೋಜನೆಯ ಪಾಲನ್ನು ನಿಲ್ಲಿಸಲಾಗಿದೆ. ಪೆಟ್ರೋಲ್, ಡೀಸೆಲ್, ಅಡುಗೆ ಎಣ್ಣೆ, ದಿನಸಿ ಪದಾರ್ಥಗಳು ಸೇರಿದಂತೆ ದಿನ ಬಳಕೆಯ ವಸ್ತುಗಳನ್ನು ಏರಿಕೆ ಮಾಡುವ ಮೂಲಕ ಬಡಜನರ ಜೆಬಿಗೆ ಕತ್ತರಿಯಾಗುತ್ತಿರುವುದು ಎಷ್ಟು ಸರಿ ಎಂದು ಪ್ರಶ್ನಿಸಿದರು. ರೈತರು ಬೆಳೆದ ಬೆಳೆಗಳನ್ನು ಉಳಿಸಿಕೊಳ್ಳಲು ರಾಜ್ಯ ಸರ್ಕಾರ ನಾಲೆಗಳಿಗೆ ನೀರು ನೀಡದೆ ಅನ್ಯಾಯ ಮಾಡುತ್ತಿದೆ. ಸಂಕಷ್ಟದಲ್ಲಿರುವ ರೈತರು ಮತ್ತು ಬಡ ಜನರಿಗೆ ಮತ್ತಷ್ಟು ಬೆಲೆಗಳನ್ನು ಏರಿಕೆ ಮಾಡುವ ಮೂಲಕ ನೆಮ್ಮದಿಯ ಬದುಕಿಗೆ ಕೊಡಲಿ ಪೆಟ್ಟು ನೀಡಿದೆ. ವಿದ್ಯುತ್ ದರ ಏರಿಕೆ, ಮದ್ಯದ ದರ ಏರಿಕೆ, ನೋಂದಣಿ ಮತ್ತು ಮುದ್ರಾಂಕ ಶುಲ್ಕ ಏರಿಕೆ ಸೇರಿದಂತೆ ಇತರ ಸೇವೆಗಳ ಮೇಲೆ ಅಧಿಕ ತೆರಿಗೆ ವಿಧಿಸಿ ಅವುಗಳನ್ನು ವಸೂಲಿ ಮಾಡುವ ಪ್ರವೃತ್ತಿಯನ್ನು ಬೆಳೆಸಿಕೊಂಡು ರಾಜ್ಯ ಸರ್ಕಾರ ಒಂದು ಕೈಯಲ್ಲಿ ಕೊಟ್ಟು ಮತ್ತೊಂದು ಕೈಯಲ್ಲಿ ಕಿತ್ತುಕೊಳ್ಳುವ ಪ್ರವೃತ್ತಿಯನ್ನು ಬೆಳೆಸಿಕೊಂಡಿದೆ. ಸರ್ಕಾರಿ ಕಚೇರಿಗಳಲ್ಲಿ ವಿಫರಿತ ಭ್ರಷ್ಟಚಾರ ನಡೆಯುತ್ತಿದೆ. ಆದ್ದರಿಂದ ರಾಜ್ಯದ ಜನ ಈ ಸರ್ಕಾರವನ್ನು ಕಿತ್ತೊಗೆಯುವ ತೀರ್ಮಾನ ಮಾಡಬೇಕು ಎಂದು ಕರೆ ನೀಡಿದರು



ಮನ್ ಮುಲ್ ನಿರ್ದೇಶಕಿ ರೂಪ, ಮುಖಂಡರಾದ ಕೃಷ್ಣೇಗೌಡ, ಎಂ.ಸಿ.ಸಿದ್ದು, ಎಂ.ಸತೀಶ್, ಮ.ನ.ಪ್ರಸನ್ನಕುಮಾರ್, ವಿ.ಸಿ.ಯೋಗನಂದ, ವಿ.ಕೆ.ರವಿಕುಮಾರ್, ಮಧುಕುಮಾರ್, ಸಂತೋಷ್, ಸುಧಾಕರ್, ಕೆಂಪಬೋರಯ್ಯ, ಮಮತಾಚಂದನ್, ರೂಪ, ಲಲಿತಾ ಸಿದ್ದರಾಜು, ಪೂರ್ಣಿಮಾ ಸೇರಿದಂತೆ ಇತರರು ಇದ್ದರು.

ಪೆಟ್ರೋಲ್, ಡಿಸೆಲ್ ಮತ್ತು ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡಿರುವ ರಾಜ್ಯದ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ತಾಲೂಕು ಘಟಕದ ವತಿಯಿಂದ ಪಟ್ಟಣದಲ್ಲಿ ಬೆಂಗಳೂರು ಮೈಸೂರು ಹೆದ್ದಾರಿ ಸಂಚಾರ ತಡೆದು ಪ್ರತಿಭಟನೆ ಮಾಡಿದರು. ಎಸ್.ಪಿ.ಸ್ವಾಮಿ, ರೂಪ, ಸತೀಶ್, ಶ್ವೇತಾ, ಮ.ನ.ಪ್ರಸನ್ನಕುಮಾರ್, ಕೃಷ್ಣೇಗೌಡ, ಎಂ.ಸಿ.ಸಿದ್ದು, ಯೋಗನಂದ ಇತರರು ಇದ್ದರು.

# ದೇವಸ್ಥಾನಕ್ಕೆ ಆಗಮಿಸಿ ಸುಬ್ರಹ್ಮಣ್ಯ ಸ್ವಾಮಿಯ ಎದುರು ನರ್ತಿಸಿದ ನವಿಲು!




ಆಧುನಿಕ ಜಗತ್ತಿನಲ್ಲಿ ಪ್ರಾಚೀನ ವಸ್ತುಗಳ ಬಗ್ಗೆ ದಿನೇ ದಿನೇ ಆಸಕ್ತಿ ಹೆಚ್ಚಾಗುತ್ತಿದೆ. ಪುರಾತನ ಆಲದ ಅಚ್ಚರಿಯ ವಸ್ತುಗಳ ಬಗ್ಗೆ ಕೌತುಕ ಬೆಳೆಸಿಕೊಳ್ಳುವವರ ಸಂಖ್ಯೆ ಏರುಗತಿಯಲ್ಲಿದೆ. ತಮಿಳುನಾಡಿನ ಪ;ಲ್ಲಡಂ ಬಳಿಯ ವಡಮಲೈಪಾಳ್ಯಂನಲ್ಲಿರುವ ಶ್ರೀ ಸುಬ್ರಹ್ಮಣ್ಯ ಸ್ವಾಮಿ ದೇವಸ್ಥಾನದಲ್ಲಿ ಅಚ್ಚರಿಯ ಘಟನೆಯೊಂದು ವರದಿಯಾಗಿದೆ.

ಶ್ರೀ ಸುಬ್ರಹ್ಮಣ್ಯ ಸ್ವಾಮಿ ದೇವಸ್ಥಾನದಲ್ಲಿ ವಿಶೇಷ ಪೂಜೆಯೊಂದರ ವೇಳೆ ನವಿಲೊಂದು ಆಗಮಿಸಿ ಸುಬ್ರಹ್ಮಣ್ಯ ದೇವರಿಗೆ ಗೌರವ ಸಲ್ಲಿಸಿ ಭಕ್ತರಿಗೆ ವಿಸ್ಮಯ ಮೂಡಿಸಿದೆ. ನವಿಲು ಪೂಜೆಯ ಉದ್ದಕ್ಕೂ ಗರ್ಭಗುಡಿಯಲ್ಲಿಯೇ ಇದ್ದು, ಸುಬ್ರಹ್ಮಣ್ಯ ದೇವರಿಗೆ ಗೌರವ ಸಲ್ಲಿಸುವುದನ್ನು ಕಂಡು ಭಕ್ತರು ಆಶ್ಚರ್ಯಚಕಿತರಾಗಿದ್ದಾರೆ.

# ರಾಜ್ಯ ಸರ್ಕಾರ ಪೌಷ್ಟಿಕ ಆಹಾರ ನೀಡಬೇಕು

ಸಾಗರ. ಒಂದು ವರ್ಷದ ಪೌಷ್ಟಿಕ ಆಹಾರ ನೀಡುವ ಭರವಸೆ ನೀಡಿದ್ದ ರಾಜ್ಯ ಸರಕಾರವು ಆರು ತಿಂಗಳ ಟೆಂಡರ್ ಸಹ ಕೂಡ ಕರೆಯದೆ ಬುಡಕಟ್ಟು ಜನರ ಹೊಟ್ಟೆ ಮೇಲೆ ತಣ್ಣೀರ ಬಟ್ಟೆ ಹಾಕಿದೆ ಎಂದು ಅರಣ್ಯಮೂಲ ಬುಡಕಟ್ಟು ಒಕ್ಕೂಟದ ಜಿಲ್ಲಾ ಸಂಚಾಲಕ ರಾಮಣ್ಣ ಹಸಲರು ಹೇಳಿದರು.

ಪಟ್ಟಣದ ಉಪವಿಭಾಗಾಧಿಕಾರಿ ಕಚೇರಿ ಎದುರು ಬುಧವಾರ ಒಕ್ಕೂಟ ಆಯೋಜಿಸಿರುವ ಅಹೋರಾತ್ರಿ ಪ್ರತಿಭಟನೆ ವೇಳೆ ಅವರು ಮಾತನಾಡಿದರು.

ಬುಡಕಟ್ಟು ಸಮುದಾಯದವರಿಗೆ 2019-20ರಿಂದ ರಾಜ್ಯ ಸರಕಾರವು ಆರು ತಿಂಗಳ ಕಾಲ ಪೌಷ್ಟಿಕ ಆಹಾರ ನೀಡುವ ಯೋಜನೆ ಜಾರಿಗೆ ತಂದಿತ್ತು. ಅದನ್ನು ಈಗಿನ ಸಿದ್ದರಾಮಯ್ಯ ನೇತೃತ್ವದ ಸರಕಾರ ವರ್ಷವಿಡೀ ನೀಡುವ ಭರವಸೆ ನೀಡಿತ್ತು.

ಚುನಾವಣೆ ನೀತಿ ಸಂಹಿತೆ ಇರುವುದರಿಂದ ಹೊಸದಾಗಿ ಟೆಂಡರ್ ಕರೆಯಲು ಆಗುತ್ತಿಲ್ಲ ಎಂದು ನೆಪ ಹೇಳಿ ಪೌಷ್ಟಿಕ ಆಹಾರ ವಿತರಣೆ ನಿಲ್ಲಿಸಿ ಬಡ ಬುಡಕಟ್ಟು ಜನರಿಗೆ ಮೋಸ ಮಾಡಿತ್ತು. ಈಗ ಅಧಿಕಾರಿಗಳನ್ನು ಕೇಳಿದರೆ, ಬಜೆಟ್ ನೀಡಿಲ್ಲ. ನಮಗೆ ಬರುತ್ತಿದ್ದಂತೆ ನಿಮಗೆ ಕೊಡುತ್ತೇವೆ ಎನ್ನುತ್ತಿದ್ದಾರೆ ಎಂದರು.

ಸಮಾಜ ಕಲ್ಯಾಣ ಇಲಾಖೆ ಮೂಲಕ ಹಾಸ್ಟೆಲ್‌ಗಳಲ್ಲಿ ಹೋಗಿ ನಾವು ಪೌಷ್ಟಿಕ ಆಹಾರ ಪಡೆದುಕೊಳ್ಳಬೇಕಾಗುತ್ತಿದೆ. ಜಿಲ್ಲೆಯಲ್ಲಿರುವ 7 ಸಾವಿರ ಕುಟುಂಬಗಳು ಇದರಿಂದ ತೊಂದರೆಗೀಡಾಗಿವೆ.

ವೃದ್ಧರು, ಮಹಿಳೆಯರು ಕಾಡು, ಬೆಟ್ಟದಲ್ಲಿ ಆರೆಂಟು ಕಿಮೀ ನಡೆದು, ಬಸ್ ಹಿಡಿದು ಪಟ್ಟಣದಲ್ಲಿರುವ ಸಮಾಜ ಕಲ್ಯಾಣ ಇಲಾಖೆ ಹಾಸ್ಟೆಲ್‌ಗೆ ಹೋಗಿ ಆಹಾರ ಪಡೆದು, ಮೂಟೆ ಹೊತ್ತು ವಾಪಾಸ್ ಮನೆ ಸೇರುವಾಗ ರಾತ್ರಿಯಾಗುತ್ತದೆ. ಇದನ್ನು ತಪ್ಪಿಸಿ, ಬಡವರನ್ನು ಕಾಪಾಡಬೇಕೆನ್ನುವುದು, ಪೌಷ್ಟಿಕ ಆಹಾರ ವಿತರಣೆ ಅಂಗನವಾಡಿ ಮೂಲಕವೇ ನಡೆಯಬೇಕೆನ್ನುವುದು ನಮ್ಮ ಹೋರಾಟದ ಪ್ರಮುಖ ಉದ್ದೇಶವಾಗಿದೆ.

ರಾಜ್ಯದ 11 ಜಿಲ್ಲೆಯಲ್ಲಿ ಅಂಗನವಾಡಿ ಮೂಲಕವೇ ಆಹಾರ ವಿತರಣೆ ನಡೆಯುತ್ತಿದ್ದು, ನಮ್ಮಲ್ಲಿ ಮಾತ್ರ ಇದು ಇಂದಿಗೂ ಜಾರಿಗೆ ಬಂದಿಲ್ಲ. ಇದರ ಬದಲಾಗಿ ರಾಜ್ಯಾದ್ಯಂತ ಏಕ ರೂಪದ ವಿತರಣೆ ನಡೆಯಬೇಕೆನ್ನುವುದು ನಮ್ಮೆಲ್ಲರ ಆಗ್ರಹವಾಗಿದೆ ಎಂದರು.

ಒಕ್ಕೂಟದ ಮಹಿಳಾ ಮುಖಂಡರಾದ ಲಕ್ಷ್ಮಮ್ಮ ಹಿರೇಮನೆ ಮಾತನಾಡಿ, ಎಲ್ಲದ್ದಕ್ಕೂ ಹೋರಾಟ ಮಾಡಿ ಹಕ್ಕು ಪಡೆಯುವುದು ಅನಿವಾರ್ಯ ಎಂಬ ಸ್ಥಿತಿಯನ್ನು ರಾಜ್ಯ ಸರಕಾರ ನಿರ್ಮಾಣ ಮಾಡಿದೆ. ಪೌಷ್ಟಿಕ ಆಹಾರ ಪಡೆಯುವುದು ಬುಡಕಟ್ಟು ಒಕ್ಕೂಟದ ಹಕ್ಕಾಗಿದ್ದು, ಆನಿಟ್ಟಿನಲ್ಲಿ ಸರಕಾರ ಕೂಡಲೇ ಕ್ರಮ ತೆಗೆದುಕೊಳ್ಳಬೇಕು.

ಮುಖ್ಯವಾಗಿ ಸ್ಥಳೀಯ ಅಂಗನವಾಡಿ ಮೂಲಕ ಸಮುದಾಯಗಳಿಗೆ ಆಹಾರ ಪೂರೈಕೆ ಮಾಡಬೇಕೆನ್ನುವುದು ಒತ್ತಾಯವಾಗಿದೆ ಎಂದರು. ಪ್ರತಿಭಟನೆಯಲ್ಲಿ ಶಿವಾನಂದ ಕುಗ್ವೆ. ನಾಗರತ್ನ, ಮಂಜಪ್ಪ, ಜಯಮ್ಮ, ಶಿವಪ್ಪ, ಗೋಪಾಲ, ರವಿ ಕುಗ್ವೆ, ಲತಾಶ್ರೀ, ಕಮಲ, ಶುಕ್ರ, ಸರಸ್ವತಿ, ಸಾವಿತ್ರಿ, ಕಮಲಾಕ್ಷಿ ಮುಪ್ಪಾನೆ, ಪಾರ್ವತಮ್ಮ, ಚಂದ್ರಶೇಖರ್, ವನಜಾಕ್ಷಿ ಮೊದಲಾದವರು ಹಾಜರಿದ್ದರು. ...

ವರದಿ.: ರಾಘವೇಂದ್ರ ತಾಳಗುಪ್ಪ




Printed by : H.L.AMARANATH, Owned by: H.L.AMARANATH, Printed at : SREE MANJUNATHA ENTERPRISES No. 7, Tirugappa lane, Cottonpet cross, Cottonpet, Bangalore-560053.
Published at : No.97, 2nd Cross, Vivekanandanagar, Khadi Commission Layout, BSK 3rd Stage, Kathariguppe Main Road, Bengaluru-560085. Mobile: 9663122276 Editor : H.L.AMARANATH